# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –308 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 04–07–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 308 | RNI No: KARKAN/2023/88462 | KA/SK/CTA-874/2024-2026 | Chitradurga | Date: 04-07-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜಿಲ್ಲಾಸ್ಪತ್ರೆಯಲ್ಲಿ ಆಶಾ ಕಿರಣ ದೃಷ್ಟಿ ಕೇಂದ್ರ ಉದ್ಘಾಟನೆ 2

ಒಳ ಮೀಸಲಾತಿ ಜಾರಿಗೊಳಿಸದ ಸರ್ಕಾರದ ವಿರುದ್ಧ ಜು.1 ರಂದು ಶವಯಾತ್ರೆ 3

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಭಾಗ್ಯ 4



ಸುದ್ದಿ, ಜಾಹಿರಾತಿಗೆ 9686622252



## ಫಾಸ್ಟ್ ನ್ಯೂಸ್

### ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿಗೆ 1ನೇ ತರಗತಿಯಿಂದ 8ನೇ ತರಗತಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಮುಸ್ಲಿಂ, ಕ್ರಿಶ್ಚಿಯನ್, ಜೈನ್ , ಬೌದ್ಧ, ಸಿಖ್ ಹಾಗೂ ಪಾರ್ಸಿ ಸಮುದಾಯದ ವಿದ್ಯಾರ್ಥಿಗಳು ಅರ್ಜಿಗಳನ್ನು ಆನ್‌ಲೈನ್ ವೆಬ್‌ಸೈಟ್ https://ssp.karnataka.gov.in ಮೂಲಕ ಅರ್ಜಿ ಸಲ್ಲಿಬಹುದು. ಸೆಪ್ಟೆಂಬರ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ, ತಾಲೂಕು ಮಾಹಿತಿ ಕೇಂದ್ರ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿ ಭೇಟಿ ನೀಡಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

### ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ ಅರ್ಜಿ ಆಹ್ವಾನ



» ಚಿತ್ರದುರ್ಗ

2025–26ನೇ ಸಾಲಿಗೆ ಯುಪಿಎಸ್‌ಸಿ, ಕೆಎಎಸ್ ಗೆಜೆಟೆಡ್ ಪ್ರೊಬೇಷನರ್ ಹಾಗೂ ಕೆಪಿಎಸ್‌ಪಿ ಗ್ರೂಪ್ ಸಿ, ಆರ್‌ಆರ್‌ಬಿ ಮತ್ತು ಎಸ್‌ಎಸ್‌ಸಿ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿಗೆ ಆಯ್ಕೆ ಮಾಡಲು ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 02 ಕೊನೆಯ ದಿನವಾಗಿದೆ. ಅರ್ಜಿಗಳನ್ನುಸೇವಾಸಿಂಧುವೆಬ್‌ಸೈಟ್ https://sevasindhu.karnataka.gov.in/sevasindhu/Departmentsservices ಈ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಲು ಸೂಚಿಸಲಾಗಿದೆ.

**ಅರ್ಜಿ ಸಲ್ಲಿಸಲು ಇರುವ ಅರ್ಹತೆಗಳು:** ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅಲ್ಪಸಂಖ್ಯಾತರ ಸಮುದಾಯಕ್ಕೆ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ಸೇರಿದವಾಗಿರಬೇಕು. ಅಭ್ಯರ್ಥಿಯು ಸರ್ಕಾರದಿಂದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಹೊಂದಿರಬೇಕು. ಅಭ್ಯರ್ಥಿಯ ವಯೋಮಿತಿ ಯುಪಿಎಸ್‌ಸಿ/ಕೆಎಎಸ್ ಗೆಜೆಟೆಡ್ ಪ್ರೊಬೇಷನರ್ ಹಾಗೂ ಕೆಪಿಎಸ್‌ಸಿ ಗ್ರೂಪ್ ಸಿ ತರಬೇತಿಗೆ 21 ಹಾಗೂ 35 ವರ್ಷಗಳು ಮತ್ತು ಆರ್‌ಆರ್‌ಬಿ ಮತ್ತು ಎಸ್‌ಎಸ್‌ಸಿ ತರಬೇತಿಗೆ ಕನಿಷ್ಟ 18 ಹಾಗೂ ಗರಿಷ್ಟ 30 ವರ್ಷಗಳು ಮೀರಿರಬಾರದು. ಕೇಂದ್ರ ಮತ್ತು ರಾಜ್ಯ ಸರ್ಕಾರದ ನೌಕರಿಯಲ್ಲಿರುವ ಅಭ್ಯರ್ಥಿಗಳು ಅರ್ಹರಿರುವುದಿಲ್ಲ. ಹಿಂದಿನ ಸಾಲಿನಲ್ಲಿ ಐಎಎಸ್, ಕೆಎಎಸ್ ತರಬೇತಿ ಪಡೆದ ಅಭ್ಯರ್ಥಿಗಳು ಅರ್ಹರಿರುವುದಿಲ್ಲ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಜಿ.ರೇಖಾ ತಿಳಿಸಿದ್ದಾರೆ.

### ಶುಲ್ಕ ಮರುಪಾವತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

2025–26ನೇ ಸಾಲಿಗೆ ವಿದ್ಯಾರ್ಥಿವೇತನ ಮೆಟ್ರಿಕ್ ನಂತರ ಮತ್ತು ಮೆರಿಟ್–ಕಂ–ಮೀನ್ಸ್ "ಶುಲ್ಕ ಮರುಪಾವತಿ"ಗೆ ಪಿಯುಸಿ, ಡಿಪ್ಲೋಮ, ತಾಂತ್ರಿಕ ಮತ್ತು ವೃತ್ತಿಪರ ಕೋರ್ಸ್‌ಗಳು, ಪದವಿ ಮತ್ತು ಸ್ನಾತಕೋತ್ತರ ಪದವಿಗೆ ದಾಖಲಾತಿ ಪಡೆದಿರುವ ಅರ್ಹ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 30 ಅರ್ಜಿ ಸಲ್ಲಿಸಲು ಕೊನೆಯ ದಿನ. ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ https://ssp.karnataka.gov.in ಈ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಿ ಹೆಚ್ಚಿನ ಮಾಹಿತಿ ಪಡೆಯಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಜಿ.ರೇಖಾ ತಿಳಿಸಿದ್ದಾರೆ.

# ಭದ್ರಾ: ಅನುದಾನ ಬಿಡುಗಡೆಗೆ ಒತ್ತಾಯ

» ಚಿತ್ರದುರ್ಗ



ಮಧ್ಯ ಕರ್ನಾಟಕದ ಬಯಲು ಸೀಮೆ ಪ್ರದೇಶಗಳಿಗೆ ನೀರುಣಿಸುವ ಮಹತ್ವದ ಭದ್ರಾ ಮೇಲ್ದಂಡೆ ಯೋಜನೆಗೆ ಅನುದಾನ ಬಿಡುಗಡೆ ಮಾಡುವಂತೆ ಆಗ್ರಹಿಸಿ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಜಲ ಶಕ್ತಿ ಸಚಿವ ಸಿ.ಆರ್. ಪಾಟೀಲ್ ಸೇರಿದಂತ ಕರ್ನಾಟಕ ಪ್ರತಿನಿಧಿಸುವ ಎಲ್ಲ ಸಚಿವರು ಹಾಗೂ ಸಂಸತ್ ಸದಸ್ಯರಿಗೆ ಪತ್ರ ಬರೆದಿದೆ.

ಇಲ್ಲಿನ ಪತ್ರಕರ್ತರ ಭವನದಲ್ಲಿ ಗುರುವಾರ ಸುದ್ದಿಗೋಷ್ಟಿಯಲ್ಲಿ ಪತ್ರ ಬಿಡುಗಡೆ ಮಾಡಿ ಮಾತನಾಡಿದ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಅನುದಾನದ ಕೊರತೆಯಿಂದಾಗಿ ಭದ್ರಾ ಮೇಲ್ದಂಡೆ ಕಾಮಗಾರಿ ಪೂರ್ಣ ಪ್ರಮಾಣದಲ್ಲಿ ಸ್ಥಗಿತಗೊಂಡಿದೆ. ಬಜೆಟ್ ನಲ್ಲಿ ಘೋಷಿಸಿದ 5300 ಕೋಟಿ ರು ಅನುದಾನವ ಕೇಂದ್ರ ಸರ್ಕಾರ ನೀಡುತ್ತಿಲ್ಲ, ಕೇಂದ್ರದತ್ತ ಬೊಟ್ಟು ಮಾಡಿ ರಾಜ್ಯ ಸರ್ಕಾರ ತಾನೂ ಅನುದಾನ ವ್ಯಯಮಾಡುತ್ತಿಲ್ಲ. ಹಾಗಾಗಿ ಯೋಜನೆ ಬಸವಳಿದಿದೆ. ದಿನ ದಿನಕ್ಕೆ ಯೋಜನಾ ವೆಚ್ಚ ದ್ವಿಗುಣವಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ತುಂಗಾ ಮತ್ತು ಭದ್ರಾ ಜಲಾಶಯದಿಂದ ಒಟ್ಟು 29.90 ಟಿಎಂಸಿ ನೀರು ಬಳಕೆ ಮಾಡಿಕೊಂಡು ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ ಹಾಗೂ ತುಮಕೂರು ಜಿಲ್ಲೆಗಳ ಸುಮಾರು 2.25 ಲಕ್ಷ ಹೆಕ್ಟೇರು ಪ್ರದೇಶಕ್ಕೆ ಮೈಕ್ರೋ ಇರಿಗೇಷನ್ ಮೂಲಕನೀರಾವರಿಕಲ್ಪಿಸುವ ಹಾಗೂ 367 ಕೆರೆಗಳ ತುಂಬಿಸುವ ಯೋಜನೆ ಅಂತರ್ಜಲ ಹೆಚ್ಚಿಸುವ ಯೋಜನೆ ಇದಾಗಿದೆ .ಕರ್ನಾಟಕ ಸರ್ಕಾರ 21,473 ಕೋಟಿ ರುಪಾಯಿಗೆ ಪರಿಷ್ಕೃತ ಡಿಪಿಆರ್ ತಯಾರಿಸಿ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಭದ್ರಾ ಮೇಲ್ದಂಡೆಯ ರಾಷ್ಟ್ರೀಯ ಯೋಜನೆಯಾಗಿಸುವ ನಿಟ್ಟಿನಲ್ಲಿ 15–2–2022 ರಂದು ನಡೆದ ಕೇಂದ್ರದ 14 ನೇ ಹೈಪವರ್ ಸ್ಕ್ರೀನಿಂಗ ಕಮಿಟಿ ಸಭೆ ಶಿಫಾರಸು ಮಾಡಿತು. ನಂತರ 12–10–2022 ನಡೆದ ಕೇಂದ್ರ ಸರ್ಕಾರದ ಹಣಕಾಸು ಸಚಿವಾಲಯದ ಸಾರ್ವಜನಿಕ ಹೂಡಿಕೆ ಮಂಡಳಿ ಸಭೆ 5300 ಕೋಟಿ ನೆರವು ನೀಡಲು ತೀರ್ಮಾನಿಸಿ ರಾಷ್ಟ್ರೀಯ ಯೋಜನೆಗೆ ಸೇರಿಸಲು ಶಿಫಾರಸು ಮಾಡಿತು ಎಂದು ಸಮಿತಿ ಪ್ರಧಾನಿಗೆ ಬರೆದ ಪತ್ರದಲ್ಲಿ ಹಳೆಯದ ನೆನಪು ಮಾಡಿದೆ.

ನಂತರದ ಬೆಳವಣಿಗೆಯಲ್ಲಿ 2023–24 ನೇ ಸಾಲಿನ ಕೇಂದ್ರ ಬಜೆಟ್ ಭಾಷಣದಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದ ನೆರವು 5300 ಕೋಟಿ ರು ಘೋಷಿಸಲಾಗಿದೆ. ನಂತರದಲ್ಲಿ ಎರಡು ಬಜೆಟ್ ಮಂಡನೆಯಾದರೂ ಇದುವರೆಗೂ 5300 ಕೋಟಿ ರುಪಾಯಿ ಅನುದಾನ ಬಿಡುಗಡೆಯಾಗದೇ ಇರುವುದು ಈ ಭಾಗದ ರೈತರಲ್ಲಿ ಅಸಮಧಾನ ಮೂಡಿಸಿದೆ.

ಚಿತ್ರದುರ್ಗ, ತುಮಕೂರು, ಚಿಕ್ಕಮಗಳೂರು, ದಾವಣಗೆರೆ ವ್ಯಾಪ್ತಿಯ ರೈತರು ಕಳೆದ ಐದು ದಶಕಗಳಿಂದ ಭದ್ರಾ ಮೇಲ್ದಂಡೆಗೆ ಹೋರಾಟ ನಡೆಸಿಕೊಂಡು ಬಂದು ಹಲವು ಸರ್ಕಾರಗಳ ಮುಂದೆ ನೀರಾವರಿ ಕಲ್ಪಿಸುವಂತೆ ಕೋರಿದ್ದರ ಪರಿಣಾಮ ಕರ್ನಾಟಕ ಸರ್ಕಾರ ಜಾರಿಗೊಳಿಸಲು ಮುಂದಾಗಿ ಕಾಮಗಾರಿ ಕೈಗೆತ್ತಿಕೊಂಡಿತ್ತು. ಈ ಪ್ರದೇಶದಲ್ಲಿನ ಮಣ್ಣು ಫಲವತ್ತಾಗಿದ್ದರೂ , ಅಂತರ್ಜಲ ಮಟ್ಟ ಕುಸಿತದಿಂದಾಗಿ ಕೃಷಿಕರು ತೊಂದರೆ ಅನುಭವಿಸುತ್ತಿದ್ದಾರೆ. ತುಮಕೂರು ಜಿಲ್ಲೆಯ ಪಾವಗಡ ಮತ್ತು ಶಿರಾ ತಾಲೂಕುಗಳಲ್ಲಿ ಅಂತರ್ಜಲ ಕುಸಿತದಿಂದಾಗೆ ಪ್ಲೋರೈಡ್ ಅಂಶದ ನೀರನ್ನು ಅಲ್ಲಿನ ಜನ ಕುಡಿಯುತ್ತಿದ್ದಾರೆ. ಗಂಭೀರ ಆರೋಗ್ಯ ಸಮಸ್ಯೆ ಎದುರಿಸುತ್ತಿದ್ದಾರೆ. ಕೇಂದ್ರ ಬಜೆಟ್ ಘೋಷಣೆಯಂತೆ 5300 ಕೋಟಿ ರು ನೆರವು ನೀಡಿ ಭದ್ರಾ ಮೇಲ್ದಂಡೆ ಕಾಮಗಾರಿ ಪೂರ್ಣಗೊಳಿಸಲು ಸಹಾಯ ಮಾಡಬೇಕು. ಪ್ರಧಾನ ಮಂತ್ರಿ ಕಿಸಾನ್ ಸಂಚಯಿನಿ ಯೋಜನೆಯಡಿಯಾದರೂ ಅನುದಾನ ಬಿಡುಗಡೆ ಮಾಡಬೇಕು ಎಂದು ವಿನಂತಿಸಲಾಗಿದೆ.

ಕೇಂದ್ರ ಸಚಿವರುಗಳಾದ ಸಚಿವೆ ನಿರ್ಮಲಾ ಸೀತರಾಮನ್, ಹೆಚ್.ಡಿ.ಕುಮಾರಸ್ವಾಮಿ, ವಿ.ಸೋಮಣ್ಣ, ಪ್ರಹ್ಲಾದ ಜೋಷಿ, ಶೋಭಾ ಕರಂದ್ಲಾಜೆ, ಮಾಜಿ ಪ್ರಧಾನಿ ಹಾಗೂ ರಾಜ್ಯ ಸಭೆ ಸದಸ್ಯ ಹೆಚ್.ಡಿ.ದೇವೇಗೌಡ, ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ರಾಜ್ಯದ ಎಲ್ಲ ಸಂಸದರುಗಳಿಗೆ ಪತ್ರ ಬರೆದು ಭದ್ರಾ ಮೇಲ್ದಂಡೆಗೆ ಅನುದಾನ ಕೊಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವಂತೆ ಪತ್ರದಲ್ಲಿ ಮನವಿ ಮಾಡಲಾಗಿದೆ.

ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್. ದಯಾನಂದ್, ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ರೈತ ಸಂಘದ ಜಿಲ್ಲಾಧ್ಯಕ್ಷ ಹಂಪಯ್ಯನಮಾಳಿಗೆ ಧನಂಜಯ, ಸರ್ವೋದಯ ಕರ್ನಾಟಕ ಸಂಘಟನೆ ಮುಖಂಡ ಜೆ.ಯಾದವರೆಡ್ಡಿ, ರೈತ ಸಂಘದ ಕರಿಬಸಪ್ಪ,ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ ಸುದ್ದಿಗೋಷ್ಠಿಯಲ್ಲಿದ್ದರು.

# 10 ರಂದು ಶಿವಶರಣ ಹಡಪದ ಅಪ್ಪಣ್ಣ ಜಯಂತಿ

» ಚಿತ್ರದುರ್ಗ

ಜುಲೈ 10 ರಂದು ಶಿವಶರಣ ಹಡಪದ ಅಪ್ಪಣ್ಣ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಕಚೇರಿ ತಹಶೀಲ್ದಾರ್ ಸಿದ್ದೇಶ್ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಜಯಂತಿ ಆಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಸರ್ಕಾರದನಿರ್ದೇಶನದಂತೆಜಿಲ್ಲಾಡಳಿತ,ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಶಿಷ್ಟಾಚಾರ ಪಾಲನೆಯೊಂದಿಗೆ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಆಚರಿಸಲಾಗುವುದು. ಅಪ್ಪಣ್ಣನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಗೌರವ ಸಮರ್ಪಿಸಲಾಗುವುದು. ಶಿವಶರಣ ಅಪ್ಪಣನವರ ಜೀವನ, ವಚನ ಹಾಗೂ ತತ್ವಗಳು ಸಾರುವ ನಿಟ್ಟಿನಲ್ಲಿ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗುವುದು. ಹಡಪದ ಸಮಾಜದವರು ಹಾಗೂ ಸಾರ್ವಜನಿಕರು ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಸಬೇಕು ಎಂದು ತಹಶೀಲ್ದಾರ್ ಸಿದ್ದೇಶ್ ಕೋರಿದರು.ಜಯಂತಿ ಕಾರ್ಯಕ್ರಮಕ್ಕೆ ನುರಿತ ಉಪನ್ಯಾಸಕರನ್ನು ಆಹ್ವಾನಿಸಲಾಗುವುದು. ಇದರೊಂದಿಗೆ ಶಿವಶರಣ ಹಡಪದ ಅಪ್ಪಣ್ಣ ಸೇರಿದಂತೆ ಇತರೆ ವಚನಕಾರರ ವಚನಗಳ ಸಂಗೀತ ಗಾಯನ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ಎಂ. ಗುರುನಾಥ್ ಸಭೆಯಲ್ಲಿ ತಿಳಿಸಿದರು.

ಜಿಲ್ಲಾ ಹಡಪ ಸಮಾಜದ ಅಧ್ಯಕ್ಷ ನಾಗರಾಜಪ್ಪ, ಜಿಲ್ಲಾ ಕಾರ್ಯದರ್ಶಿ ಎ.ಆರ್.ವೀರಭದ್ರಪ್ಪ, ನಿರ್ದೇಶಕ ವೇದಮೂರ್ತಿ, ತಾಲೂಕು ಅಧ್ಯಕ್ಷ ವೃಷಭೇಂದ್ರಪ್ಪ, ಉಪನ್ಯಾಸಕರ ಸಂಘದ ಮಾಜಿ ಅಧ್ಯಕ್ಷ ಎಸ್.ಲಕ್ಷ್ಮಣ್ ಸೇರಿದಂತೆ ಅಧಿಕಾರಿಗಳು ಸಮುದಾಯದ ಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದರು.

## ಆಶಾ ಕಿರಣ ದೃಷ್ಟಿ ಕೇಂದ್ರ ಉದ್ಘಾಟನೆ



» ಚಿತ್ರದುರ್ಗ

ಹೊಸದುರ್ಗದ ಬೆಲಗೂರಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸ್ಥಾಪಿಸಿರುವ ಆಶಾ ಕಿರಣ ಶಾಶ್ವತ ದೃಷ್ಟಿ ಕೇಂದ್ರವನ್ನು ತಾಲೂಕು ಆರೋಗ್ಯಾಧಿಕಾರಿ ಹಾಗೂ ಮಕ್ಕಳ ತಜ್ಞ ಡಾ.ರಾಘವೇಂದ್ರ ಪ್ರಸಾದ್ ಗುರುವಾರ ಉದ್ಘಾಟಿಸಿದರು. ಇದೇ ವೇಳೆ ಹಮ್ಮಿಕೊಳ್ಳಲಾದ ವಿಶ್ವ ತಂಬಾಕು ರಹಿತ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಂಬಾಕು ಬಳಕೆಯಿಂದ ಉಂಟಾಗುವ ಹಾನಿಯ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿ ತಂಬಾಕು ತ್ಯಜಿಸಲು ಸಲಹೆ ನೀಡಿದರು. ಈ ಸಂದರ್ಭದಲ್ಲಿ ದಂತ ವೈದ್ಯಾಧಿಕಾರಿ ಡಾ. ಸುಮಾ ಮತ್ತು ಡಾ. ಹರ್ಷ, ಬೆಲಗೂರು ಸಮುದಾಯ ಆರೋಗ್ಯ ಕೇಂದ್ರ ಹಾಗೂ ಬಲ್ಲಾಳಸಮುದ್ರದ ಪ್ರಾಥಮಿಕ ಆರೋಗ್ಯ ಕೇಂದ್ರ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಪ್ರಕೃತಿದತ್ತವಾದ ವನ್ಯಸಂಪತ್ತಿನ ಸಂರಕ್ಷಣೆಗೆ ನಾವೆಲ್ಲರೂ ಸಂಕಲ್ಪಮಾಡೋಣ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ



ವನ್ಯಸಂಪತ್ತನ್ನು ಉಳಿಸಿಬೆಳೆಸುವ ಜವಾಬ್ದಾರಿ ಎಲ್ಲರ ಮೇಲಿದೆ. ನಮ್ಮ ಸುತ್ತಮುತ್ತಲ ಪರಿಸರದಲ್ಲಿ ಮರಗಿಡಗಳ ಸಂಖ್ಯೆ ಹೆಚ್ಚಿದ್ದಷ್ಟು ನಮ್ಮ ಆರೋಗ್ಯ ಸ್ಥಿರವಾಗಿರುತ್ತದೆ. ಉತ್ತಮ ಆರೋಗ್ಯದ ಜೊತೆಗೆ ಲವಲವಿಕೆಯ ಜೀವನಕ್ಕೆ ನಮ್ಮ ಪ್ರಕೃತಿಯೂ ಕಾರಣ. ಆದ್ದರಿಂದ ನಾವುಗಳು ಪರಿಸರ ಪ್ರೇಮಿಗಳಾಗಿ ಪರಿಸರ ಸಂರಕ್ಷಣೆಯಲ್ಲಿ ತೊಡಗಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ನಿಗದ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಗುರುವಾರ ನಗರದ ಹೊರವಲಯದಲ್ಲಿರುವ ಆದರ್ಶ ಮಹಾವಿದ್ಯಾಲಯ ಆವರಣದಲ್ಲಿ ಅರಣ್ಯ ಇಲಾಖೆ ಹಮ್ಮಿಕೊಂಡಿದ್ದ ವನಮಹೋತ್ಸವ ಕಾರ್ಯಕ್ರಮವನ್ನು ಗಿಡನೆಡುವಮೂಲಕ ಚಾಲನೆ ನೀಡಿ ಮಾತನಾಡಿದರು. ಕಳೆದ ತಿಂಗಳಷ್ಟೇ ಕ್ಷೇತ್ರದ ವಿವಿದೆಡೆ ವಿಶ್ವಪರಿಸರ ದಿನಾಚರಣೆಯನ್ನು ಆಚರಣೆ ಮಾಡಲಾಗಿದೆ. ಪರಿಸರವನ್ನು ಸದಾಕಾಲ ನಾವೆಲ್ಲರೂ ಸಂರಕ್ಷಣೆ ಮಾಡುವ ಮೂಲಕ ವನಮಹೋತ್ಸವ ಕಾರ್ಯಕ್ರಮದ ಯಶಸ್ವಿಗೆ ಕೈಜೋಡಿಸೋಣವೆಂದರು.

ಹಿರಿಯೂರು ಉಪವಿಭಾಗದ ಅರಣ್ಯಸಂರಕ್ಷಣಾಧಿಕಾರಿ ಎಸ್.ಸುರೇಶ್ ಮಾತನಾಡಿ, ವನಮಹೋತ್ಸವ ಕಾರ್ಯಕ್ರಮವನ್ನು ಏಕಕಾಲದಲ್ಲಿ ಹಿರಿಯೂರು, ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕುಗಳಲ್ಲೆ ಪ್ರಾರಂಭಿಸಲಾಗಿದೆ. ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶಾಸಕ ಟಿ.ರಘುಮೂರ್ತಿ ಮಾರ್ಗದರ್ಶನದಲ್ಲಿ ಕ್ಷೇತ್ರದಾದ್ಯಂತ ವಿವಿಧ ಸ್ಥಳಗಳಲ್ಲಿ ಸಾವಿರಾರು ಗಿಡಗಳನ್ನು ನೆಡುವ ಯೋಜನೆಯನ್ನು ಹಮ್ಮಿಕೊಂಡಿದೆ. ಅರಣ್ಯ ಇಲಾಖೆ ಈ ಕಾರ್ಯಕ್ಕೆ ಎಲ್ಲರ ಸಹಕಾರ ಅಗತ್ಯವೆಂದರು.

ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ನಗರಸಭೆ ಅಧ್ಯಕ್ಷೆ ಶಿಲ್ಪಿಮುರುಳಿ, ಉಪಾಧ್ಯಕ್ಷೆ ಕವಿತಾಬೋರಯ್ಯ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯರಾದ ಎಂ.ಜೆ. ರಾಘವೇಂದ್ರ, ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ಆದರ್ಶ ಪ್ರಾಂಶುಪಾಲ ಅಶೋಕ್‌ರೆಡ್ಡಿ, ಜಿ.ಟಿ.ಶಶಿಧರ, ಪಾಲಯ್ಯ, ಸೇವಾದಳ ಅಧ್ಯಕ್ಷ ತಿಪ್ಪೇಸ್ವಾಮಿ, ಅರುಣ್, ಡಿಆರ್‌ಎಫ್‌ಒ ರಾಜೇಶ್, ದರ್ಶನ್, ಗುರುಲಿಂಗೇಶ್, ಮುರುಡಿಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಜೆ.ಎನ್.ಕೋಟೆ ಗುರುಸಿದ್ದಪ್ಪನವರಿಗೆ ನುಡಿ ನಮನ

» **ಚಿತ್ರದುರ್ಗ**



ಚಿತ್ರದುರ್ಗ ಜಿಲ್ಲಾ ಜೆ.ಡಿ.ಎಸ್ ಘಟಕದಲ್ಲಿ ಹಿರಿಯ ಉಪಾಧ್ಯಕ್ಷರಾಗಿದ್ದ ಜೆ.ಎನ್. ಕೋಟೆ ಗುರುಸಿದ್ದಪ್ಪನವರಿಗೆ ನುಡಿನಮನ ಕಾರ್ಯ ಕ್ರಮವನ್ನು 05-07-2025ರ ಬೆಳಗ್ಗೆ 11 ಗಂಟೆಗೆ ಚಿತ್ರದುರ್ಗ ನಗರದ ನೀಲಕಂಠೇಶ್ವರ ದೇವಸ್ಥಾನ ಪಕ್ಕದ ಜಿಲ್ಲಾ ಜೆ.ಡಿ.ಎಸ್ ಕಛೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಜೆ ಡಿ ಎಸ್ ಘಟಕದ ಮಹಾ ಪ್ರಧಾನ ಕಾರ್ಯದರ್ಶಿ ಡಿ. ಗೋಪಾಲಸ್ವಾಮಿ ನಾಯಕ ತಿಳಿಸಿದ್ದಾರೆ. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಜೆ.ಡಿ.ಎಸ್ ಘಟಕದ ಅಧ್ಯಕ್ಷರಾದ ಎಂ ಜಯಣ್ಣ ವಹಿಸುವರು ಕರ್ನಾಟಕ ಪ್ರದೇಶ ಜನತಾದಳದ ಪ್ರಧಾನ ಕಾರ್ಯದರ್ಶಿ ಮತ್ತು ಚಿತ್ರದುರ್ಗ ನಗರಸಭೆ ಮಾಜಿ ಅಧ್ಯಕ್ಷರಾದ ಬಿ. ಕಾಂತರಾಜ್ , ಜೆ.ಡಿ.ಎಸ್ ಘಟಕದ ಮಾಜಿ ಜಿಲ್ಲಾ ಅಧ್ಯಕ್ಷರಾದ ಡಿ.ಯಶೋಧರ ,ಜಿಲ್ಲಾ ಕಾರ್ಯಧ್ಯಕ್ಷರಾದ ಜಿ.ಬಿ. ಶೇಖರ್. ಚಿತ್ರದುರ್ಗ ತಾಲ್ಲೂಕು ಘಟಕದ ಅಧ್ಯಕ್ಷರಾದ ಸಣ್ಣತಿಮ್ಮಪ್ಪ ,ಚಳ್ಳಕೆರೆ ತಾಲ್ಲೂಕಿನ ಘಟಕದ ಅಧ್ಯಕ್ಷರಾದ ಪಿ.ತಿಪ್ಪೇಸ್ವಾಮಿ, ಹಿರಿಯೂರು ತಾಲ್ಲೂಕಿನ ಘಟಕದ ಅಧ್ಯಕ್ಷರಾದ ಹನುಮಂತ ರಾಯಪ್ಪ, ಮೊಳಕಾಲ್ಮೂರು ಅಧ್ಯಕ್ಷರಾದ ಕರಿಬಸಪ್ಪ, ಹೊಸದುರ್ಗ ತಾಲ್ಲೂಕ್ ಘಟಕದ ಅಧ್ಯಕ್ಷರಾದ ಗಣೇಶ್‌ಮೂರ್ತಿ,ಹೊಳಲ್ಕೆರೆ ತಾಲೂಕು ಘಟಕದ ಅಧ್ಯಕ್ಷರಾದ ಪರಮೇಶ್ವರಪ್ಪ, ಹಿರಿಯೂರು ವಿಧಾನ ಸಭೆಯ ಕ್ಷೇತ್ರದ ರವೀಂದ್ರಪ್ಪ, ಚಳ್ಳಕೆರೆ ವಿಧಾನಸಭೆ ಕ್ಷೇತ್ರದ ರವೀಶ್ ಮೊಳಕಾಲ್ಮೂರು ವೀರಭದ್ರಪ್ಪ, ವಿದ್ಯಾರ್ಥಿ ಘಟಕದ ಅಧ್ಯಕ್ಷರಾದ ಪ್ರತಾಪ್ ಜೋಗಿ, ಲಿಂಗರಾಜ್ ಅಬ್ಬು ಲಲಿತಾ ಕೃಷ್ಣಮೂರ್ತಿ ಗೀತಮ್ಮ ಭಾಗವಹಿಸುವರು

### ನೇಣು ಹಾಕಿಕೊಂಡು ವ್ಯಕ್ತಿ ಆತ್ಮಹತ್ಯೆ

» **ಹೊಸದುರ್ಗ**

ವಿಪರೀತ ಮಧ್ಯವ್ಯಸನಿಯಾಗಿದ್ದ ವ್ಯಕ್ತಿಯೋರ್ವ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಸಾಣೇಹಳ್ಳಿ ಗ್ರಾಮದಲ್ಲಿ ಜರುಗಿದೆ. ಮೃತನನ್ನು ಸಾಣೇಹಳ್ಳಿ ಗ್ರಾಮದ ವಿರುಪಾಕ್ಷಯ್ಯ ಎಂಬುವವರ ಪುತ್ರ ಕರಿಬಸಯ್ಯ ಎಂದು ತಿಳಿದು ಬಂದಿದ್ದು ಈತ ವಿಪರೀತ ಕುಡಿಯುವ ಚಟಕ್ಕೆ ಬಲಿಯಾಗಿದ್ದು ಇದರಿಂದ ಜಿಗುಪ್ಸೆಗೊಂಡು ಬುಧವಾರ ತಡರಾತ್ರಿ ತನ್ನ ಮನೆಯ ಧನದ ಕೊಟ್ಟಿಗೆಗೆ ಹೋಗಿ ಹಗ್ಗದಿಂದ ನೇಣು ಹಾಕಿಕೋಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ತಿಳಿದು ಬಂದಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ

» **ದಾವಣಗೆರೆ**

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ವಿವಿಧ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ ಪಡೆಯಲು ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಯುಪಿಎಸ್‌ಸಿ, ಐಎಎಸ್ ಗೆಜೆಟೆಡ್ ಪ್ರೊಬೇಷನರ್ ಪರೀಕ್ಷೆಗೆ ವಸತಿಯುತ ತರಬೇತಿಯನ್ನು ಬೆಂಗಳೂರಿನ ಹಜ್ ಭವನದಲ್ಲಿ ಹಾಗೂ ಕೆಪಿಎಸ್‌ಸಿ ಗ್ರೂಫ್ ಸಿ , ಆರ್‌ಆರ್‌ಬಿ & ಎಸ್‌ಎಸ್‌ಸಿ ಪರೀಕ್ಷಾ ಪೂರ್ವ ತರಬೇತಿಯನ್ನು ಪ್ರತಿಷ್ಠಿತ ಸಂಸ್ಥೆಗಳ ಮೂಲಕ ನೀಡಲಾಗುತ್ತಿದೆ. ಅರ್ಜಿಯನ್ನು ಸೇವಾಸಿಂಧೂ ಮೂಲಕ https://sevasindhu.karnataka.gov.in ಆಗಸ್ಟ್ 2 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರ 08192-250066 ಹಾಗೂ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,# 44, ಎ ಬ್ಲಾಕ್ , 2ನೇ ಮಹಡಿ, ಜಿಲ್ಲಾ ಆಡಳಿತ ಭವನ , ಕರೂರು ಕ್ರಾಸ್, ಹರಿಹರ ರಸ್ತೆ, ದಾವಣಗೆರೆ- 08192-250022 ಸಂಪರ್ಕಿಸಲು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### ಭದ್ರಾ ನದಿಪಾತ್ರದ ಜನರಿಗೆ ಎಚ್ಚರಿಕೆ

» **ದಾವಣಗೆರೆ**

ಭದ್ರಾನದಿ ದಂಡೆಯ ತಗ್ಗು ಪ್ರದೇಶದಲ್ಲಿ ವಾಸಿಸುವ ಜನರಿಗೆ ಭದ್ರಾ ಜಲಾಶಯದ ಪ್ರದೇಶದಲ್ಲಿ ಮುಂಗಾರು ಮಳೆ ಪ್ರಾರಂಭವಾಗಿದ್ದು, ಸಾಕಷ್ಟು ಒಳಹರಿವು ಆಗುತ್ತಿದೆ ಮತ್ತು ನೀರಿನ ಸಂಗ್ರಹ ಮಟ್ಟವು ಹೆಚ್ಚಾಗತೊಡಗಿದೆ. ಹರಿದು ಬರುವ ಒಳಹರಿವಿನ ಪ್ರಮಾಣ 20000-25000 ಕ್ಯೂಸೆಕ್ಸ್ ಇದ್ದು, ಅಣೆಕಟ್ಟು ಸುರಕ್ಷತೆ ದೃಷ್ಠಿಯಿಂದ ಹೆಚ್ಚುವರಿ ನೀರನ್ನು ಯಾವ ಸಮಯದಲ್ಲಾದರೂ ಸ್ಪಿಲ್ ವೇ ಗೇಟ್ ಮುಖಾಂತರ ಬಿಡಲಾಗುವುದು, ಭದ್ರಾ ನದಿಯ ಎಡ ಮತ್ತು ಬಲ ದಂಡೆಯ ಉದ್ದಕ್ಕೂ ತಗ್ಗು ಪ್ರದೇಶದಲ್ಲಿ ವಾಸಿಸುವ ಜನರು .ಮುಂಜಾಗ್ರತೆಯಾಗಿ ಸುರಕ್ಷಿತ ಸ್ಥಳಗಳಿಗೆ ಹೋಗಬೇಕು. ನದಿ ಪಾತ್ರದಲ್ಲಿ ಸಾರ್ವಜನಿಕರು ತಿರುಗಾಡುವುದು, ಜಾನುವಾರುಗಳನ್ನು ನದಿ ಪಾತ್ರದಲ್ಲಿ ಮೇಯಿಸುವುದನ್ನು ನಿಷೇಧಿಸಲಾಗಿದೆ. ಎಂದು ಕ.ನೀ.ನಿ.ನಿ ಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

# ಜಿಲ್ಲಾಸ್ಪತ್ರೆಯಲ್ಲಿ ಆಶಾ ಕಿರಣ ದೃಷ್ಟಿ ಕೇಂದ್ರ ಉದ್ಘಾಟನೆ

» **ಚಿತ್ರದುರ್ಗ**

ಜಿಲ್ಲಾ ಆಸ್ಪತ್ರೆ ಸೇರಿದಂತೆ ರಾಜ್ಯಾದ್ಯಂತ ಒಟ್ಟು 393 ಆಶಾ ಕಿರಣ ದೃಷ್ಟಿ ಕೇಂದ್ರಗಳನ್ನು ಏಕಕಾಲಕ್ಕೆ ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಡಿಜಿಟಲ್ ವ್ಯವಸ್ಥೆಯ ಮೂಲಕ ಉದ್ಘಾಟಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಅವರು ಜಿಲ್ಲಾ ಆಸ್ಪತ್ರೆಯ ಕಣ್ಣಿನ ವಿಭಾಗದಲ್ಲಿ ಸಾಂಕೇತಿಕವಾಗಿ ಚಾಲನೆ ನೀಡಿದರು.

ನಂತರ ಮಾತನಾಡಿದ ಡಿಹೆಚ್‌ಓ ಡಾ.ಜಿ.ಪಿ.ರೇಣುಪ್ರಸಾದ್, ಆಶಾ ಕಿರಣ ದೃಷ್ಟಿ ಕೇಂದ್ರ ಸ್ಥಾಪನೆ ಸಾರ್ವಜನಿಕ ಆರೋಗ್ಯ ಕಾರ್ಯಕ್ರಮದಲ್ಲಿ ವಿಶ್ವ ಆರೋಗ್ಯ ಸಂಸ್ಥೆಯು ಮೆಚ್ಚುಗೆ ವ್ಯಕ್ತ ಪಡಿಸಿರುವ ಕಾರ್ಯಕ್ರಮವಾಗಿದೆ ಎಂದು ಹೇಳಿದರು.

ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ ಮತ್ತು ಎಲ್ಲಾ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಒಟ್ಟು ಜಿಲ್ಲೆಯಾದ್ಯಂತ 17 ಕಡೆ ಇಂದಿನಿಂದ ಸೇವೆ ಒದಗಿಸಲಾಗುತ್ತದೆ ಎಂದರು.



ಜಿಲ್ಲಾ ಅಂಧತ್ವ ನಿವಾರಣಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಜ್ ಮಾತನಾಡಿ, ಈ ಹಿಂದೆ ಆಶಾ ಕಿರಣ ಯೋಜನೆಯಡಿಯಲ್ಲಿ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಮನೆ ಮನೆ ಬೇಟಿ ಮಾಡಿ ಆಶಾ ಕಾರ್ಯಕರ್ತೆಯರಿಂದ ದೃಷ್ಟಿ ದೋಷ ಪರೀಕ್ಷೆ ನಡೆಸಿ ಎರಡನೇ ಹಂತದಲ್ಲಿ ಈಗಾಗಲೇ ಗುರುತಿಸಿದ ದೃಷ್ಟಿ ದೋಷದ ಫಲಾನುಭವಿಗಳನ್ನು ಸಹಾಯಕ ನೇತ್ರಾಧಿಕಾರಿಗಳ ಮೂಲಕ ಮತ್ತು ಕಣ್ಣಿನ ತಜ್ಞರ ಮೂಲಕ ತಪಾಸಣೆ ನಡೆಸಿ ದತ್ತಾಂಶವನ್ನು ಗಣಕೀಕೃತಗೊಳಿಸಿ ಶಾಲಾ ಮಕ್ಕಳಿಗೆ ಇತರೆ ಸಾರ್ವಜನಿಕರಿಗೆ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ಮತ್ತು ಉಚಿತ ಕನ್ನಡಕಗಳನ್ನು ವಿತರಿಸುವ ಯೋಜನೆ ಅನುಷ್ಠಾನ ಗೊಳಿಸಲಾಗುತ್ತಿದೆ. ಯೋಜನೆಯ 3 ಹಂತದಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಕಣ್ಣಿನ ದೋಷ ನಿವಾರಣೆಗಾಗಿ ಆಶಾ ಕಿರಣ ದೃಷ್ಟಿಕೇಂದ್ರಗಳ ಸ್ಥಾಪನೆಯಾಗಿದ್ದು, ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಸಾಂಕೇತಿಕವಾಗಿ 32 ಜನರಿಗೆ ದೃಷ್ಟಿ ದೋಷ ತಪಾಸಣೆ ನಡೆಸಲಾಯಿತು. ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ, ನಿವಾಸಿ ವೈದ್ಯಾಧಿಕಾರಿ ಡಾ.ಆನಂದ್‌ಪ್ರಕಾಶ್,ವೈದ್ಯರಾದಡಾ.ಶಿಲ್ಪಾ, ಡಾ.ಪ್ರದೀಪ್ ಸಹಾಯಕ ನೇತ್ರಾಧಿಕಾರಿ ಕೆ.ಸಿ.ರಾಮು ಉಪಸ್ಥಿತರಿದ್ದರು.

# ರೋಟರಿ ಬಾಲಭವನದಲ್ಲಿ ಪತ್ರಿಕಾ ದಿನಾಚರಣೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಎಸ್.ಆರ್.ಬಿ.ಎಂ.ಎಸ್ ರೋಟರಿ ಬಾಲಭವನದಲ್ಲಿ ಬುಧವಾರ ಸಂಜೆ ವಾರದ ಸಭೆಯಲ್ಲಿ ರೋಟರಿ ಕ್ಲಬ್, ಚಿತ್ರದುರ್ಗ ಇನ್ನರ್ ವೀಲ್ ಕ್ಲಬ್ ಆಫ್ ಚಿತ್ರದುರ್ಗ ಪೋರ್ಟ್ ಇವರ ಸಂಯುಕ್ತಾಶ್ರಯದಲ್ಲಿ ವೈದ್ಯರ, ಲೆಕ್ಕ ಪರಿಶೋಧಕರ ಹಾಗೂ ಪತ್ರಿಕಾ ದಿನಾಚರಣೆಯ ಅಂಗವಾಗಿ ಅವರ ಕ್ಷೇತ್ರದಲ್ಲಿ ಸಾಧನೆಯನ್ನು ಮಾಡಿದವರನ್ನು ಸನ್ಮಾನಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಡಾ.ಅರವಿಂದ ಪಾಟೀಲ್ ಮಾತನಾಡಿ, ರೋಟರಿ ಸಂಸ್ಥೆ ದೊಡ್ಡ ಸೇವಾ ಸಂಸ್ಥೆಗಳಲ್ಲಿ ಒಂದಾಗಿದ್ದು, ಸಮಾಜದ ಉನ್ನತಿಗಾಗಿ ಕಾರ್ಯಗಳನ್ನು ಸಂಸ್ಥೆಯ ಮುಖ್ಯ ಗುರಿಯಾಗಿದೆ ಸಂಸ್ಥೆಯು ಉತ್ತಮ ರೀತಿಯಲ್ಲಿ ಹೆಚ್ಚು ಹೆಚ್ಚು ಸೇವಾ ಕಾರ್ಯಗಳನ್ನು ಮಾಡಲಿ ಎಂದು ಆಶಿಸಿ ರೋಟರಿ ಸಂಸ್ಥೆಯು ಸಮಾಜದ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಅವುಗಳಲ್ಲಿ ಪಲ್ಸ್ ಪೋಲಿಯೋ ನಿರ್ಮೂಲನೆ, ಅಂಧತ್ವ ನಿರ್ಮೂಲನೆ, ಆರೋಗ್ಯ ಸುಧಾರಣೆ, ಶಿಕ್ಷಣಕ್ಕೆ ಆದ್ಯತೆ ಹಾಗೂ ಸ್ವಚ್ಛ ಸಮಾಜ ನಿರ್ಮಾಣ ಮಾಡುವುದು ಆಗಿದೆ ಎಂದರು.

ಮತ್ತೋರ್ವ ವೈದ್ಯರಾದ ಡಾ,ತೇಜಸ್ವಿ ಮಾತನಾಡಿ, ರೋಟರಿ ಕ್ಲಬ್ ಪ್ರಪಂಚದಲ್ಲಿ ಸೇವಾ ಮನೋಭಾವದಿಂದ ಕಾರ್ಯವನ್ನು ಮಾಡುತ್ತಿದೆ. ಜನರಿಗೆ ಉತ್ತಮವಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಬಡವರಿಗೆ ಸಹಾಯವನ್ನು ಮಾಡುತ್ತಿದೆ. ರೋಟರಿ ಕ್ಲಬ್ ಸಂಸ್ಥೆಯಿಂದ ಲಕ್ಷಾಂತರ ಜನತೆ ಉಪಯೋಗವನ್ನು ಪಡೆಯುತ್ತಿದ್ದಾರೆ. ಯಾವುದೇ ಸ್ವಾರ್ಥ ಇಲ್ಲದೆ ಸೇವೆಯನ್ನು ಮಾಡುವ ಉದ್ದೇಶದಿಂದ ಈ ಸಂಸ್ಥೆ ಸ್ಥಾಪನೆಯಾಗಿದೆ ಎಂದರು.




ಲೆಕ್ಕಪರಿಶೋಧಕರಾದಕುಮುದಿನಿಮಾತನಾಡಿ, ರೋಟರಿ ಸಂಸ್ಥೆಯ ಕಾರ್ಯವೈಖರಿಯಿಂದ ಬಡ ಜನರಿಗೆ ಉಪಯೋಗವಾಗಿದೆ, ಹಣ ಇಲ್ಲದೆ ಲಕ್ಷಾಂತರ ಜನತೆಗೆ ಈ ಸಂಸ್ಥೆ ಸಹಾಯವಾಗಿದೆ. ಆರೋಗ್ಯ, ಶಿಕ್ಷಣ, ಮಹಿಳೆಯರಿಗೆ ಈ ಸಂಸ್ಥೆ ನೆರವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಡಾ.ಅರವಿಂದ ಪಾಟೀಲ್, ಡಾ,ತೇಜಸ್ವಿ, ಲೆಕ್ಕ ಪರಿಶೋಧಕರಾದ ಕುಮುದಿನಿ ಹಾಗೂ ಪತ್ರಕರ್ತರಾದ ಮುತ್ತುಸ್ವಾಮಿಯವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ರೋಟರಿ ಕ್ಲಬ್‌ನ ಅಧ್ಯಕ್ಷರಾದ ಭಾಗ್ಯಲಕ್ಷ್ಮೀ, ಕಾರ್ಯದರ್ಶಿ ಶುಭಾ ರಾಮಸ್ವಾಮಿ, ಇನ್ನರ್ ವೀಲ್ ಕ್ಲಬ್ ಆಫ್ ಚಿತ್ರದುರ್ಗ ಪೋರ್ಟ್‌ನ ಅಧ್ಯಕ್ಷರಾದ ಉಮಾ ರಮೇಶ್ ರೋಟೇರಿಯನ್‌ಗಳಾದ ಯೋಗೀಶ್ ಸಹ್ಯಾದ್ರಿ, ಮದುಪ್ರಸಾದ್, ವಿರೇಶ್, ಗಾಯತ್ರಿ ಶಿವರಾಂ, ಸೂರ್ಯ ಪ್ರಕಾಶ್, ವೀರಭದ್ರಸ್ವಾಮಿ, ಜಯಶ್ರೀ ಷಾ, ಮಾಧುರಿ, ಶಿವರಾಂ, ಮೈಲೇಶ್ ಕುಮಾರ್, ಚಂದ್ರಮೋಹನ್, ವೆಂಕಟೇಶ್, ಮಧು ಕುಮಾರ್ ಭಾಗವಹಿಸಿದ್ದರು.

## ಮೇಕೇನಹಟ್ಟಿ: ಋತುಸ್ರಾವ ನೈರ್ಮಲ್ಯ ನಿರ್ವಹಣೆ ಜಾಗೃತಿ




**ಚಿತ್ರದುರ್ಗ:** ಹೊಳಲ್ಕೆರೆ ತಾಲೂಕಿನ ಮೇಕೇನಹಟ್ಟಿ ಗೊಲ್ಲರಹಟ್ಟಿಯಲ್ಲಿ ಮೌಢ್ಯ ಪದ್ಧತಿ ಮತ್ತು ಆಚರಣೆ ಕುರಿತು ಹಾಗೂ ಋತುಸ್ರಾವ ನೈರ್ಮಲ್ಯ ನಿರ್ವಹಣೆ ವಿಷಯಗಳ ಕುರಿತು ಜಾಗೃತಿ ಮೂಡಿಸಲಾಯಿತು.

ಜೆಂಡರ್ ಸ್ಪೆಷಲಿಸ್ಟ್ ಡಿ.ಗೀತಾ ಅವರು ಗೊಲ್ಲರಹಟ್ಟಿಗಳಲ್ಲಿ ತಿಂಗಳ ರಜೆ ಮತ್ತು ಬಾಣಂತಿ ಇರುವ ಸಮಯದಲ್ಲಿ ಇಲ್ಲಿನ ಹೆಣ್ಣು ಮಕ್ಕಳು ಮನೆಯನ್ನು ತೊರೆದು ಊರಿನ ಆಚೆ ಗುಡಿಸಿಲಿನಲ್ಲಿ ಇರುವ ಪದ್ಧತಿ ಇದ್ದು, ಈ ಸಮಯದಲ್ಲಿ ಅವರಿಗೆ ಋತುಚಕ್ರ, ಋತುಸ್ರಾವ ಮತ್ತು ಮುಟ್ಟಿನ ನೈರ್ಮಲ್ಯ ಇವುಗಳ ಬಗ್ಗೆ ಹಾಗೂ ವೈಯಕ್ತಿಕ ಸ್ವಚ್ಛತೆಯ ಬಗ್ಗೆ ಮತ್ತು ಸ್ಯಾನಿಟರಿ ಪ್ಯಾಡ್‌ಗಳ ಉಪಯೋಗ ಅದರ ಬಳಕೆ ಇವುಗಳ ಬಗ್ಗೆ ಮಾಹಿತಿ ನೀಡಿದರು. ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಬಗ್ಗೆ ಹಾಗೂ ಮಕ್ಕಳ ಸಹಾಯವಾಣಿ ಸಂಖ್ಯೆ 1098, ಮಹಿಳಾ ಸಹಾಯವಾಣಿ 181, ತುರ್ತು ಸಹಾಯವಾಣಿ 112 ಸಂಖ್ಯೆಗೆ ಕರೆ ಮಾಡುವಂತೆ ಜಾಗೃತಿ ಮೂಡಿಸಲಾಯಿತು. ಇದೇ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಅಧಿಕಾರಿಗಳಿಂದ ಗೊಲ್ಲರಹಟ್ಟಿಯ ಮಹಿಳೆಯರಿಗೆ ಆರೋಗ್ಯ ತಪಾಸಣೆ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಹನುಮಂತಣ್ಣ, ಶಾಲೆಯ ಮುಖ್ಯ ಶಿಕ್ಷಕ ದಯಾಕರಾ, ಹಿರಿಯ ಆರೋಗ್ಯ ಸಹಾಯಕಿ ಶಿಲ್ಪ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ಶೋಭಾ, ಮಹಿಳಾ ಮೇಲ್ವಿಚಾರಕಿ ರುಕ್ಕಿಬಾಯಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮದ ಮಹಿಳೆಯರು ಇದ್ದರು.

# ಮನೆ ಮಾರಿ ವಚನ ಸಂರಕ್ಷಿಸಿದ ನಿಜಶರಣ

» **ಹೊಸದುರ್ಗ**

ಬೆಳಕಿಗೊಲಿದವರ್ ಉರಿವ ಬತ್ತಿಯ ಕರುಕಕಾಣರು ಎನ್ನುವ ಮಾತಿನಂತೆ ಬದುಕಿನಲ್ಲಿ ಸಂಕಷ್ಟದ ಸಮಯವನ್ನು ಕಳೆದು ನಮಗೆ ವಚನ ಸಾಹಿತ್ಯದ ಬೆಳಕನ್ನು ನೀಡಿದವರು ವಚನ ಪಿತಾಮಹ ಫ ಗು ಹಳಕಟ್ಟಿಯವರು ಎಂದು ಕನ್ನಡ ಅಧ್ಯಾಪಕ ಗಿರಿಜಾಶಂಕರ್ ಜಿ ಎಸ್ ಹೇಳಿದರು.

ಪಟ್ಟಣದ ಶ್ರೀ ತೋಟದ ರಾಮಯ್ಯ ಗೌರಮ್ಮ ಬಾಲಿಕಾ ಪ್ರೌಢಶಾಲೆಯಲ್ಲಿ ನಡೆದ ಫ ಗು ಹಳಕಟ್ಟಿ ಜಯಂತಿ ಮತ್ತು ವಚನ ಸಾಹಿತ್ಯ ಸಂರಕ್ಷಣಾ ದಿನದಲ್ಲಿ ಉಪನ್ಯಾಸ ನೀಡುತ್ತಾ ಮಾತನಾಡಿದರು.

ಫಗುಹಳಕಟ್ಟಿಯವರುವಚನಗಳನ್ನು ಸಂಶೋಧಿಸಿ, ಸಂಗ್ರಹಿಸಿ, ಪರಿಷ್ಕರಿಸಿ, ಪ್ರಕಾಶಿಸಿ, ಮುದ್ರಿಸಿ ಪ್ರಚಾರ ಮತ್ತು ಪ್ರಸಾರವನ್ನು ಮಾಡಿದ್ದರ ಫಲವಾಗಿ ಇಂದು ವಿಶ್ವಸಾಹಿತ್ಯಕ್ಕೆ ವಚನ ಸಾಹಿತ್ಯ ಅಮೂಲ್ಯ ಆಸ್ತಿಯಾಗಿದೆ. ಇಂಥ ಅಮೂಲ್ಯ ಆಸ್ತಿಯನ್ನು ಉಳಿಸಲು ತಮ್ಮ ಸ್ವಂತ ಮನೆಯನ್ನೇ ಮಾರಿ ತಮ್ಮ ಜೀವನದ ಕೊನೆಯವರೆಗೂ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮುಖ್ಯ ಶಿಕ್ಷಕ ಎ ಎನ್ ಕಿರಣ್ ಕುಮಾರ್ ಮಾತನಾಡಿ ಸಮಾಜಕ್ಕೆ ದುಡಿದ ಫ ಗು ಹಳಕಟ್ಟಿಯಂಥವರನ್ನು ನಾವು ಪ್ರತಿನಿತ್ಯ ಸ್ಮರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮವನ್ನು ಬಿ ಪಿ ಓಂಕಾರಪ್ಪ ಉದ್ಘಾಟಿಸಿ ಮಾತನಾಡಿದರು. ಶಿಕ್ಷಕ ಜಿ ಎಲ್ ರಂಗನಾಥ್ ಅಮೃತವರ್ಷಿಣಿ , ನಿರೂಪಿಸಿದರು. ಶಿಕ್ಷಕಿ ಕೆ ಬಿ ಸವಿತಾ ಸೇರಿದಂತೆ ಶಿಕ್ಷಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಶಾಲೆಗೆ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಫೋಟೋಗಳನ್ನು ಕೊಡುಗೆಯಾಗಿ ನೀಡಿದ ವಿದ್ಯಾರ್ಥಿ ಕೀರ್ತನ ಮತ್ತು ಅವರ ಪೋಷಕರಿಗೆ ಅಭಿನಂದನೆ ಸಲ್ಲಿಸಲಾಯಿತು.



**ಹೊಸದುರ್ಗ ಪಟ್ಟಣದ ಶ್ರೀ ತೋಟದ ರಾಮಯ್ಯ ಗೌರಮ್ಮ ಬಾಲಿಕಾ ಪ್ರೌಢಶಾಲೆಯಲ್ಲಿ ನಡೆದ ಫ ಗು ಹಳಕಟ್ಟಿ ಜಯಂತಿ ಮತ್ತು ವಚನ ಸಾಹಿತ್ಯ ಸಂರಕ್ಷಣಾ ಕಾರ್ಯಕ್ರಮ.**

## ಪ್ರಮುಖ ಸುದ್ದಿ

# ಕಾರ್ಮಿಕ ವಿರೋಧಿ ನೀತಿ ವಿರುದ್ದ ಜು.9 ರಂದು ಪ್ರತಿಭಟನೆ

» **ಚಿತ್ರದುರ್ಗ**

ದುಡಿಯುವ ವರ್ಗದ ಶ್ರಮಕ್ಕೆ ತಕ್ಕ ಪ್ರತಿಫಲ ಕೊಡದ ಕೇಂದ್ರ ಸರ್ಕಾರದ ರೈತ ವಿರೋಧಿ ನೀತಿಯನ್ನು ಧಿಕ್ಕರಿಸಿ ಜು.9 ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದೆಂದು ಸರ್ವೋದಯ ಕರ್ನಾಟಕ ಪಕ್ಷದ ಜಿಲ್ಲಾಧ್ಯಕ್ಷ ಜೆ.ಯಾದವರೆಡ್ಡಿ ತಿಳಿಸಿದರು.

ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ನರೇಂದ್ರಮೋದಿ ದೇಶದ ಪ್ರಧಾನಿಯಾಗಿ ಹನ್ನೊಂದು ವರ್ಷಗಳು ಕಳೆದಿದೆ. ವರ್ಷಕ್ಕೆ ಎರಡು ಕೋಟಿ ಉದ್ಯೋಗ ನೀಡುವುದಾಗಿ ಭರವಸೆ ಕೊಟ್ಟು ಯುವ ಜನಾಂಗವನ್ನು ವಂಚಿಸಿದ್ದಾರೆ. ರೈತರು, ಕಾರ್ಮಿಕರು, ಮಹಿಳೆಯರು, ವಿದ್ಯಾರ್ಥಿಗಳು ಎಲ್ಲರೂ ಒಂದಲ್ಲ ಒಂದು ರೀತಿ ತೊಂದರೆ ಅನುಭವಿಸುವಂತಾಗಿದೆ. ವಿಶ್ವವಿದ್ಯಾನಿಲಯ, ಆಸ್ಪತ್ರೆಗಳಲ್ಲಿ ನೇರ ನೇಮಕಾತಿಯಿಲ್ಲ. ಹೊರ ಗುತ್ತಿಗೆ ಮೇಲೆ ಕೆಲಸಕ್ಕೆ ತೆಗೆದುಕೊಳ್ಳುತ್ತಿರುವುದರಿಂದ ಜೀವನ ಭದ್ರತೆಯಿಲ್ಲದಂತಾಗಿದೆ. ನರೇಗಾ ಯೋಜನೆಯಡಿ ಗ್ರಾಮೀಣ ಭಾಗಗಳಲ್ಲಿ ಕೂಲಿ ಕೆಲಸವೂ ಸಿಗದಂತ ಕಷ್ಟದ ಪರಿಸ್ಥಿತಿ ನಿರ್ಮಾಣವಾಗಿದೆ. ಬಿಸಿಯೂಟ, ಅಂಗನವಾಡಿ, ಆಶಾ ಕಾರ್ಯಕರ್ತೆಯರುಜೀವನಭದ್ರತೆಯಿಲ್ಲದೆ ನರಳುವಂತಾಗಿದೆ. ದುಡಿಯುವ ವರ್ಗ ಶೋಷಣೆಗೊಳಗಾಗಿರುವುದನ್ನು ಖಂಡಿಸಿ ದೇಶಾದ್ಯಂತ ಜು.9 ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ರೈತರು, ಕಾರ್ಮಿಕರು ವಿವಿಧ ಸಂಘಟನೆಗಳವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.



ಸಿಪಿಐ. ಜಿಲ್ಲಾ ಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು ಮಾತನಾಡಿ ಕೇಂದ್ರದಲ್ಲಿ ಬಿಜೆಪಿ. ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಕಾರ್ಮಿಕರು, ರೈತ ವಿರೋಧಿ ಕಾಯಿದೆಗಳನ್ನು ಜಾರಿಗೆ ತಂದು ಗಧಾಪ್ರಹಾರ ಮಾಡುತ್ತಿರುವುದರ ವಿರುದ್ದ ಜು.9 ರಂದು ಬೆಳಿಗ್ಗೆ 11 ಕ್ಕೆ ಯೂನಿಯನ್ ಪಾರ್ಕ್‌ನಿಂದ ಪ್ರತಿಭಟನಾ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮನವಿ ಸಲ್ಲಿಸಲಾಗುವುದು. ಕಾರ್ಮಿಕರು, ರೈತರು, ವಿದ್ಯಾರ್ಥಿಗಳು, ಮಹಿಳೆಯರು, ವಿವಿಧ ಸಂಘಟನೆಗಳವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪ್ರತಿಭಟನೆಯನ್ನು ಯಶಸ್ವಿಗೊಳಿಸುವಂತೆ ವಿನಂತಿಸಿದರು.

ಸಿ.ಕೆ.ಗೌಸ್‌ಪೀರ್ ಮಾತನಾಡುತ್ತ ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ನೀತಿಗೆ ರಾಜ್ಯ ಸರ್ಕಾರ ಬೆಂಬಲಿಸುತ್ತಿದೆ. ರೈತರು, ಕಾರ್ಮಿಕರ ಸಮಸ್ಯೆಗಳನ್ನು ಬಗೆಹರಿಸಲು ಆಗುತ್ತಿಲ್ಲ. ಕೃಷಿ ಜಮೀನುಗಳು ಕಾರ್ಪೊರೇಟ್ ಕಂಪನಿಗಳ ಪಾಲಾಗುತ್ತಿವೆ. ರೈತರು ಬೆಳೆದ ಬೆಳೆಗಳಿಗೆ ಬೆಂಬಲ ಬೆಲೆ ಸಿಗುತ್ತಿಲ್ಲ. ಕಾರ್ಮಿಕರಿಗೆ ಅನ್ಯಾಯವಾಗುತ್ತಿದೆ ಎಂದು ದೂರಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಧನಂಜಯ ಹಂಪಯ್ಯನಮಾಳಿಗೆ ಮಾತನಾಡಿ ಕೇಂದ್ರ ಸರ್ಕಾರ ಸ್ವಾಮಿನಾಥನ್ ವರದಿಯನ್ನು ಜಾರಿಗೆ ತಂದಿಲ್ಲ. ಮಳೆಗಾಲ ಆರಂಭವಾಗಿದ್ದು, ಗೊಬ್ಬರ ಸಿಗದೆ ರೈತರು ಪರದಾಡುತ್ತಿದ್ದಾರೆ. ರೈತರ ಭೂಮಿಯನ್ನ ಸರ್ಕಾರಬಲವಂತವಾಗಿಕಸಿದುಕೊಳ್ಳುತ್ತಿದೆ. ಸ್ಮಾರ್ಟ್ ಮೀಟರ್ ಅಳವಡಿಸುವ ಮೂಲಕ ರೈತರನ್ನು ಶೋಷಣೆ ಮಾಡುತ್ತಿದೆ ಎಂದು ಆಪಾದಿಸಿದರು. ಜನಶಕ್ತಿ ರಾಜ್ಯ ಸಮಿತಿ ಸದಸ್ಯ ಟಿ.ಶಫಿವುಲ್ಲಾ, ಟಿ.ಆರ್. ಉಮಾಪತಿ, ಕಾಂ.ಬಿ.ಬಸವರಾಜ್, ಜಯದೇವಮೂರ್ತಿ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಒಳ ಮೀಸಲಾತಿ ಜಾರಿಗೊಳಿಸದ ರಾಜ್ಯ ಸರ್ಕಾರದ ವಿರುದ್ಧ ಆಗಸ್ಟ್ 1 ರಂದು ಸರ್ಕಾರದ ಶವಯಾತ್ರೆ

» **ಚಿತ್ರದುರ್ಗ**

ಒಳ ಮೀಸಲಾತಿ ಜಾರಿಗೊಳಿಸದೆ ಸುಪ್ರಿಂಕೋರ್ಟ್ ಆದೇಶವನ್ನು ಧಿಕ್ಕರಿಸಿರುವ ರಾಜ್ಯ ಸರ್ಕಾರದ ವಿರುದ್ಧ ಆ.1 ರಂದು ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಪ್ರತಿಮೆ ಮುಂಭಾಗ ಸರ್ಕಾರದ ಶವಯಾತ್ರೆ ನಡೆಸಿ ಸಾಮೂಹಿಕವಾಗಿ ಕೇಶಮುಂಡನ ಮಾಡಿಕೊಳ್ಳಲಾಗುವುದೆಂದು ಒಳ ಮೀಸಲಾತಿ ಹೋರಾಟ ಸಮಿತಿ ರಾಜ್ಯ ಸಂಚಾಲಕ ಭಾಸ್ಕರ್‌ಪ್ರಸಾದ್ ಎಚ್ಚರಿಕೆ ನೀಡಿದ್ದಾರೆ.



ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಒಳ ಮೀಸಲಾತಿ ಜಾರಿಗೊಳಿಸುವಂತೆ ಸುಪ್ರೀಂಕೋರ್ಟ್ ತೀರ್ಪು ನೀಡಿ ಆ.1 ಕ್ಕೆ ಒಂದು ವರ್ಷವಾಗುತ್ತದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪರಿಶಿಷ್ಟ ಜಾತಿಯ ನೂರ ಒಂದು ಜಾತಿಗಳಿಗೆ ವಂಚನೆ ಮಾಡಿಕೊಂಡು ಬರುತ್ತಿದ್ದಾರೆ. ಅನಗತ್ಯ ಆಯೋಗ ರಚಿಸಿ ಸಂಕಷ್ಟಕ್ಕೆ ಸಿಲುಕಿಸುತ್ತಿದೆ. ಹಾಗಾಗಿ ಆ.1 ರಿಂದ 30 ರೊಳಗೆ ಯಾವುದಾದರೂ ಒಂದು ದಿನಾಂಕ ನಿಗಧಿಪಡಿಸಿಕೊಂಡು ದೆಹಲಿ ಚಲೋ ಹಮ್ಮಿಕೊಂಡು ರಾಹುಲ್‌ಗಾಂಧಿ ನಿವಾಸಕ್ಕೆ ಮುತ್ತಿಗೆ ಹಾಕಿ ರಾಜ್ಯದಲ್ಲಿರುವ ನಿಮ್ಮ ಪಕ್ಷದ ಸರ್ಕಾರಕ್ಕೆ ಸಾಮಾಜಿಕ ನ್ಯಾಯದ ಅರ್ಥ ಗೊತ್ತಿದೆಯೇ ಎಂದು ಪ್ರಶ್ನಿಸಲಾಗುವುದು. ಇದಲ್ಲದೆ ಪ್ರಧಾನಿ ಹಾಗೂ ರಾಷ್ಟ್ರಪತಿಗೆ ಮನವಿ ಸಲ್ಲಿಸಲಾಗುವುದೆಂದು ಹೇಳಿದರು.

ನೂರ ಒಂದು ಜಾತಿಗಳಿಗೂ ಸಂಜೀವಿನಿಯಾಗಿರುವ ಒಳ ಮೀಸಲಾತಿ ಜಾರಿಯಾಗಬೇಕು. ಅದಕ್ಕಾಗಿ ಎಲ್ಲಾ ಪಕ್ಷಗಳ ರಾಜಕೀಯ ನಾಯಕರುಗಳನ್ನು ಭೇಟಿ ಮಾಡುತ್ತೇವೆ. ವಿವಿಧ ಹೋರಾಟಗಾರರು, ಜನಪರ ಸಂಘಟನೆಗಳು, ಮಠಾಧೀಶರುಗಳು, ವಿವಿಧ ಜಾತಿಯ ಮುಖಂಡರುಗಳನ್ನು ಭೇಟಿಯಾಗಿ ಬೆಂಬಲ ಕೋರುತ್ತೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ನಯವಂಚಕತನ, ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪನವರ ಕುತಂತ್ರದ ವಿರುದ್ಧ ನಮ್ಮ ಹೋರಾಟ ನಿರಂತರವಾಗಿರುತ್ತದೆಂದರು.

ಕರ್ನಾಟಕ ಸಾಮಾಜಿಕ ನ್ಯಾಯ ಪರ ವಕೀಲರ ವೇದಿಕೆಯ ಎಸ್.ಅರುಣ್‌ಕುಮಾರ್ ಮಾತನಾಡಿ ಒಳ ಮೀಸಲಾತಿ ಜಾರಿಗೊಳಿಸುವಂತೆ ಸುಪ್ರಿಂಕೋರ್ಟ್ ತೀರ್ಪು ನೀಡಿ ಆ.1 ಕ್ಕೆ ಒಂದುವರ್ಷಪೂರ್ಣಗೊಳ್ಳಲಿದೆ.ಸದಾಶಿವ ಆಯೋಗ, ಮಾಧುಸ್ವಾಮಿ ಆಯೋಗದಲ್ಲಿ ದತ್ತಾಂಶ ಕುರಿತು ಸಮಗ್ರ ಮಾಹಿತಿಯಿದೆ. ಕಾಂತರಾಜ್ ಆಯೋಗದಲ್ಲಿ ಮಾದಿಗರು, ಒಲೆಯರು ಎಂಬ ಪ್ರತ್ಯೇಕ ದತ್ತಾಂಶವಿದೆ. ಇಷ್ಟೆಲ್ಲಾ ಇದ್ದರು ಮಧ್ಯಂತರ ವರದಿ ಜಾರಿಗೊಳಿಸದೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಾದಿಗರ ವಿರೋಧಿ ಸರ್ಕಾರ ಎನ್ನುವುದನ್ನು ಸಾಬೀತು ಪಡಿಸಿದ್ದಾರೆಂದು ಆಪಾದಿಸಿದರು.

ತೆಲಂಗಾಣ, ಆಂಧ್ರ, ಹರಿಯಾಣ, ತಮಿಳುನಾಡಿನಲ್ಲಿ ಒಳ ಮೀಸಲಾತಿ ಜಾರಿಯಾಗಿದೆ. ಕರ್ನಾಟಕದಲ್ಲಿ ಇನ್ನು ಆಗಿಲ್ಲ. ನಾಗಮೋಹನ್‌ದಾಸ್ ಆಯೋಗ ಕಳೆದ ತಿಂಗಳ 5 ರಂದು ಮನೆ ಮನೆ ಸಮೀಕ್ಷೆ ಆರಂಭಿಸಿದೆ. ಒಳ ಮೀಸಲಾತಿ ಜಾರಿಯಾಗಬಾರದೆಂಬುದು ಹೊಸ ಷಡ್ಯಂತ್ರ. ಜಾರಿಯಾದರೂ ಗೊಂದಲವಿರಬೇಕೆಂಬುದು ಸರ್ಕಾರದ ಉದ್ದೇಶ. ಅದಕ್ಕಾಗಿ ಉಗ್ರ ಹೋರಾಟ ನಮ್ಮದು ಎಂದು ಹೇಳಿದರು.

ಕರ್ನಾಟಕ ಸಾಮಾಜಿಕ ನ್ಯಾಯ ಪರ ವಕೀಲರ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಬೂದಿತಿಟ್ಟ ರಾಜೇಂದ್ರ ಎಲ್. ಮಾಳಪ್ಪ, ಶಿವಕುಮಾರ್ ಬೆಳ್ಳೂರ್, ರಘುರಾಜ್‌ಕೊಳ್ಳಿ, ಎಂ.ಆರ್.ಸುಧೀಂದ್ರಕುಮಾರ್, ಸುರೇಶ್, ಸಿ.ಬಸವರಾಜ್, ರಘು, ಫಕೀರಪ್ಪ, ದಲಿತ ಮುಖಂಡ ಶಿವಣ್ಣ ಇನ್ನು ಅನೇಕರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಸಮಾಜಕ್ಕಾಗಿ ದುಡಿದವರು, ಬದುಕಿದವರನ್ನು ಶಾಶ್ವತವಾಗಿ ಅವರ ಜಯಂತಿ ಆಚರಿಸುತ್ತೇವೆ

» **ಹೊಸದುರ್ಗ**

ಯಾರು ತನ್ನ ಕುಟುಂಬಕ್ಕಾಗಿ ಶ್ರಮಿಸುತ್ತಾರೋ ಅವರ ಜನ್ಮದಿನವನ್ನು ಒಂದು ತಲೆಮಾರಿಗಷ್ಟೇ ಆಚರಿಸಿಕೊಳ್ಳುತ್ತಾರೆ. ಆದರೆ ಸಮಾಜಕ್ಕಾಗಿ ದುಡಿದವರು, ಬದುಕಿದವರನ್ನು ಶಾಶ್ವತವಾಗಿ ಅವರ ಜಯಂತಿ ಆಚರಿಸುತ್ತೇವೆ. ಮನುಕುಲ ಇರುವ ವರೆಗೂ ಅತ್ಯುತ್ತಮವಾದ ವಚನಗಳನ್ನು ಬರೆದ ಕೀರ್ತಿ ಹಲವು ವಚನಕಾರರಿಗೆ ಸಲ್ಲುತ್ತದೆ ಎಂದು ತಹಸೀಲ್ದಾರ್ ತಿರುಪತಿ ಪಾಟೀಲ್ ತಿಳಿಸಿದರು.



ಪಟ್ಟಣದ ಎಸ್.ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ಇಂದಿರಾಗಾಂಧಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಫ.ಗು.ಹಳಕಟ್ಟಿ ಅವರ ಜನ್ಮದಿನ ಹಾಗೂ ವಚನ ಸಾಹಿತ್ಯಸಂರಕ್ಷಣಾ ದಿನಾಚರಣೆಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂತಹ ಆದರ್ಶ ವಚನಕಾರರ ಜನ್ಮದಿನವನ್ನು ಆಚರಿಸುವುದರಲ್ಲಿ ತುಂಬಾ ಅರ್ಥವಿದೆ. ಇವರ ಆದರ್ಶವನ್ನು ವಿದ್ಯಾರ್ಥಿಗಳು ಅಳವಡಿಸಿಕೊಂಡು, ತಮ್ಮ ನಿತ್ಯ ಜೀವನದಲ್ಲಿ ಪಾಲಿಸಿದ್ದೇ ಆದಲ್ಲಿ ಯಶಸ್ಸು ಖಂಡಿತಾ ಸಿಗುತ್ತದೆ ಎಂದು ಸಲಹೆ ನೀಡಿದರು.ಎಸ್.ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೆ.ಎಸ್.ಕಲ್ಮಠ್ ಮಾತನಾಡಿ ವಚನಕಾರರ ಜನ್ಮದಿನೋತ್ಸವದ ಆಚರಣೆ ಸ್ಮರಣೀಯ ಕಾರ್ಯಕ್ರಮ. ಕಲ್ಯಾಣ ಕ್ರಾಂತಿಯ ನಂತರ ವಚನ ಸಾಹಿತ್ಯ ಸಮೃದ್ಧವಾಗಿ ಬೆಳವಣಿಗೆ ಆಗಲು ಹಳಕಟ್ಟಿ ಅವರ ಕೊಡುಗೆಯೂ ಅಪಾರವಾಗಿದೆ. ಕಷ್ಟಪಟ್ಟು ಸಾಹಿತ್ಯ ರಚನೆ ಮಾಡಿದ್ದು, ಕರ್ನಾಟಕ ರಾಜ್ಯದ ಪುಣ್ಯ. ಅವರ ಅವಿರತ ಪ್ರಯತ್ನದ ಫಲವಾಗಿ ಕನ್ನಡ ಸಾಹಿತ್ಯವನ್ನು ಸಂರಕ್ಷಣೆ ಮಾಡಿದ ಹಿನ್ನೆಲೆಯಲ್ಲಿ ಸರಕಾರ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಆಚರಿಸುತ್ತಿರುವುದು ಶ್ಲಾಘನೀಯ ಎಂದರು.

ಸಂಸ್ಥೆಯ ಧರ್ಮದರ್ಶಿ ಎಂ.ಎಚ್.ನೀಲಕಂಠಯ್ಯ ಅಧ್ಯಕ್ಷತೆ ವಹಿಸಿದ್ದರು.

ತೋಟದ ರಾಮಯ್ಯ ಗೌರಮ್ಮ ಬಾಲಿಕಾ ಪ್ರೌಢಶಾಲೆಯ ಶಿಕ್ಷಕ ಹಾಗೂ ಲೇಖಕ ಗಿರಿಜಾ ಶಂಕರ್ ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಅಕಾಡೆಮಿಕ್ ಡೈರೆಕ್ಟರ್ ಎಂ.ಬಿ.ತಿಪ್ಪೇಸ್ವಾಮಿ, ಧರ್ಮದರ್ಶಿ ಸಿದ್ದರಾಮಣ್ಣ, ಪ್ರಾಂಶುಪಾಲ ಡಾ.ಬಸಪ್ಪ, ಉಮೇಶ್, ಕಾಲೇಜು ಸಿಬ್ಬಂದಿ ಹಾಜರಿದ್ದರು. ಕಾರ್ಯಕ್ರಮಕ್ಕೂ ಮುನ್ನ ಫ.ಗು.ಹಳಕಟ್ಟಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

# ಹೃದಯ ತಪಾಸಣಾ ಶಿಬಿರ ಆರಂಭ



» **ದಾವಣಗೆರೆ**

ಪತ್ರಿಕಾ ದಿನಾಚರಣೆಯ ಅಂಗವಾಗಿ, ಪತ್ರಕರ್ತರಿಗಾಗಿ ಉಚಿತ ಹೃದಯ ಆರೋಗ್ಯ ತಪಾಸಣಾ ಶಿಬಿರಕ್ಕೆ ಎಸ್‌ಎಸ್ ನಾರಾಯಣ ಹೆಲ್ತ್ ಸೂಪರ್‌ಸ್ಪೆಷಾಲಿಟಿ ಸೆಂಟರ್‌ನಲ್ಲಿ ಚಾಲನೆ ನೀಡಲಾಯಿತು. ಸಮಾಜದ ಅವಿಭಾಜ್ಯ ಅಂಗವಾಗಿರುವ ಮತ್ತು ಅದರ ಸುಧಾರಣೆಗಾಗಿ ಶ್ರಮಿಸುವ ಪತ್ರಕರ್ತರು, ಕೆಲಸದ ಒತ್ತಡ ಮತ್ತುಡೆಡ್‌ಲೈನ್ ನ ಕಾರಣದಿಂದಾಗಿ ತಮ್ಮ ಆರೋಗ್ಯ ಪರ ಕಾಳಜಿ ವಹಿಸುವುದು ಕಡಿಮೆ. ಆರೋಗ್ಯದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ, ಪತ್ರಕರ್ತರಿಗೆ ಇತ್ತೀಚೆಗೆ ಈ ಶಿಬಿರದ ಕೂಪನ್‌ಗಳನ್ನು ವಿತರಿಸಲಾಗಿದ್ದು, ಅವು ಜುಲೈ 31 ರವರೆಗೆ ಮಾನ್ಯವಾಗಿರುತ್ತವೆ. ಈ ಆರೋಗ್ಯ ತಪಾಸಣೆಯು ಇಸಿಜಿ, ಇಕೋ, ರಕ್ತದೊತ್ತಡ, ಜಿಆರ್‌ಬಿಎಸ್ ಮತ್ತು ವೈದ್ಯರೊಂದಿಗಿನ ಸಮಾಲೋಚನೆಯನ್ನು ಒಳಗೊಂಡಿದೆ. ಇದರ ಜೊತೆಗೆ, ವೈದ್ಯರ ಸಲಹೆಯ ಮೇರೆಗೆ ಟಿಎಂಟಿ ಅಗತ್ಯವಿರುವ ಪತ್ರಕರ್ತರಿಗೆ ಶೇ. 50 ರಷ್ಟು ರಿಯಾಯಿತಿ ನೀಡಲಾಗುವುದು. ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಸುನಿಲ್ ಭಂಡಾರಿಗಲ್ ಅವರು ದಾವಣಗೆರೆ ಗಿಲ್ಡ್‌ನ ಎಲ್ಲಾ ಪತ್ರಕರ್ತರು ಈ ಶಿಬಿರದ ಲಾಭ ಪಡೆಯುವಂತೆ ಮನವಿ ಮಾಡಿದ್ದಾರೆ. ಹೆಚ್ಚಿನ ವಿವರಗಳಿಗಾಗಿ ಸಂಪರ್ಕಿಸಿ: 9901662045.

# ಗ್ರಾಮ ಆಡಳಿತಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಿಸಿದ ಶಾಸಕ ಟಿ.ರಘುಮೂರ್ತಿ



**ಚಿತ್ರದುರ್ಗ:** ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಟಿ. ರಘುಮೂರ್ತಿ ರವರು ಚಿತ್ರದುರ್ಗ ನಗರದ ತಹಶೀಲ್ದಾರರ ಕಛೇರಿ ಸಭಾಂಗಣದಲ್ಲಿ ನಡೆದ ತುರುವನೂರು ಹೋಬಳಿಯ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್ ಟ್ಯಾಪ್ ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಚಿತ್ರದುರ್ಗ ತಹಶೀಲ್ದಾರ್ ಗೋವಿಂದರಾಜು, ಉಪ ತಹಶೀಲ್ದಾರ ನಾಗರಾಜು, ಕಂದಾಯ ನಿರೀಕ್ಷಕ ನವೀನ್, ಜಿಲ್ಲಾ ಗ್ಯಾರೆಂಟಿ ಸಮಿತಿಯ ಉಪಾಧ್ಯಕ್ಷ ಜಿ.ಟಿ. ಬಾಬು ರೆಡ್ಡಿ, ಕಂದಾಯ ಇಲಾಖೆ ಸಿಬ್ಬಂದಿಗಳು ಇದ್ದರು.

# ಹಿರಿಯೂರು ಫಲಿತಾಂಶ ಸುಧಾರಣೆಗಾಗಿ ಚಿಂತನ- ಮಂಥನ

» **ಚಿತ್ರದುರ್ಗ**

ದ್ವಿತೀಯ ಪಿಯುಸಿ ವಾರ್ಷಿಕ ಫಲಿತಾಂಶದಲ್ಲಿ ಸುಧಾರಣೆ ತರುವುದಕ್ಕಾಗಿ ಎಲ್ಲಾ ಉಪನ್ಯಾಸಕರು ಚಿಂತನ –ಮಂಥನ ನಡೆಸಬೇಕಿದೆ ಎಂದು ಶಾಲಾ ಶಿಕ್ಷಣ (ಪದವಿಪರ್ವ) ಉಪ ನರ್ದೇಶಕರಾದ ಶ್ರೀ ಕೆ ತಿಮ್ಮಯ್ಯನವರು ಉಪನ್ಯಾಸಕರುಗಳಿಗೆ ಸಲಹೆ ನೀಡಿದರು.

ದಿನಾಂಕ:03:07:2025ರಂದು ಹಿರಿಯೂರಿನ ವಾಗ್ದೇವಿ ವಿದ್ಯಾ ಸಂಸ್ಥೆಯಲ್ಲಿ ನಡೆದ ಚಿಂತನ ಮಂಥನ ಕರ್ಯಕ್ರಮವನ್ನು ಉದ್ಘಾಟಿಸಿ ತಾಲ್ಲೂ ಕಿನ ಎಲ್ಲಾ ಪದವಿಪರ್ವ ಕಾಲೇಜಿನ ಉಪನ್ಯಾಸಕರು ಹೆಚ್ಚಿನ ಪ್ರಮಾಣದಲ್ಲಿ ಫಲಿತಾಂಶ ತರಬೇಕಿದೆ ಹಾಗೂ ಇಲ್ಲಿ ಸೇರಿರುವ ಎಲ್ಲಾ ಹಿರಿಯ ಮತ್ತು ಕಿರಿಯ ಉಪನ್ಯಾಸಕರು ತಮ್ಮ ಪಾಠ ಪ್ರವಚನದಲ್ಲಿ ಬದಲಾವಣೆ ಮಾಡಿಕೊಳ್ಳಬೇಕು. ಅದಕ್ಕೆ ಬೇಕಾದ ಪರ್ವ ಸಿದ್ಧತೆ ಮಾಡಿಕೊಳ್ಳಬೇಕು. ತಮ್ಮ ಅಧ್ಯಯನ ಮತ್ತು ಅನುಭವದಿಂದ ವಿದ್ಯರ್ಥಿಗಳಿಗೆ ಪರೀಕ್ಷೆಗಳ ಬಗ್ಗೆ ಸೂಕ್ತ ಮರ್ಗರ್ಶನ ನೀಡಬೇಕು ಎಂದು ಸಲಹೆ ನೀಡಿದರು

ಜಿಲ್ಲಾ ಪ್ರಾಚರ್ಯರ ಸಂಘದ ಅಧ್ಯಕ್ಷರಾದ ದೇವೇಂದ್ರಪ್ಪನವರು ಫಲಿತಾಂಶ ಸುಧಾರಣೆಯಲ್ಲಿ ಉಪನ್ಯಾಸಕರು,ಪ್ರಾಚರ್ಯರು, ಪೋಷಕರು ಮತ್ತು ವಿದ್ಯರ್ಥಿಗಳ ಪಾತ್ರ ಮುಖ್ಯವಾದದ್ದು ಎಲ್ಲರೂ ಸೇರಿ ಚಿಂತನ ಮಂಥನ ನಡೆಸಿ ಸುಧಾರಣೆಗೆ ತರಬೇಕಿದೆ ಎಂದು ಹೇಳಿದರು

ಜಿಲ್ಲಾ ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಮಲ್ಲೇಶ್ ಮಾತನಾಡಿದರು. ಅಧ್ಯಕ್ಷತೆಯನ್ನು ರ್ಕಾರಿ ಪದವಿಪರ್ವ ಕಾಲೇಜಿನ ಪ್ರಾಚರ್ಯರಾದ ಶ್ರೀ ನಾಗರಾಜ್ ವಹಿಸಿದ್ದರು, ವಾಗ್ದೇವಿ ವಿದ್ಯಾ ಸಂಸ್ಥೆಯ ಕೆ. ವಿ. ಅಮರೇಶ್ ವೇದಿಕೆಯಲ್ಲಿದ್ದರು, ಕಾಂತರಾಜ್ ಸ್ವಾಗತಿಸಿದರು, ಕರ್ಯಕ್ರಮವನ್ನು ಜೆ.ಲೋಕೇಶ್ ನಿರೂಪಿಸಿದರು, ಡಾ.ಮಾರುತಿ ವಂದಿಸಿದರು.

## ಪ್ರಮುಖ ಸುದ್ದಿ

### ಪೋಲಿಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು

# ಜಾಗೃತಿ ಕೊರತೆಯಿಂದ ಸೈಬರ್ ಪ್ರಕರಣ ಹೆಚ್ಚುತ್ತಿವೆ

» **ಹೊಸದುರ್ಗ**

ಈಚೆಗೆ ಸೈಬರ್ ಪ್ರಕರಣಗಳು ಹೆಚ್ಚುತ್ತಿವೆ. ಎಲ್ಲಾ ಜನರಿಗೂ ಈ ಬಗ್ಗೆ ಅರಿವಿನ ಕೊರತೆಯಿದೆ. ಸೈಬರ್ ಕ್ರೈಂ ಬಗ್ಗೆ ಜನರಿಗೆ ಜಾಗೃತಿ ಮೂಡಿಸುವ ಕಾರ್ಯವಾಗಬೇಕು. ಕಟ್ಟ ಕಡೆಯ ವ್ಯಕ್ತಿಗೂ ಇದರ ಅರಿವಾಗಬೇಕು ಎಂದು ಪೋಲಿಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು ತಿಳಿಸಿದರು.



ಪೋಲಿಸ್ ಇಲಾಖೆ ವತಿಯಿಂದ ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ಆಯೋಜಿಸಿದ್ದ 'ಬೀಟ್ ಸದಸ್ಯರು ಹಾಗೂ ಸಾರ್ವಜನಿಕ ಸಂಪರ್ಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ತುರ್ತು ಸಹಾಯವಾಣಿ 112 ಗೆ ದಿನದ 24 ಗಂಟೆಗಳಲ್ಲಿ ಯಾವಾಗಲಾದರೂ ಸರಿ, ಅಪಾಯದಲ್ಲಿದ್ದಾಗ ಕರೆ ಮಾಡಿ. ಮುಂದಿನ 15 ನಿಮಿಷದಲ್ಲಿ ಪೋಲಿಸರು ಬಂದು ಸಹಾಯ ಮಾಡುತ್ತಾರೆ. ಇದರ ಸದುಪಯೋಗ ಎಲ್ಲರೂ ಪಡೆದುಕೊಳ್ಳಬೇಕು. ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಮಾಧಕ ವ್ಯಸನಕ್ಕೆ ತುತ್ತಾಗಿದ್ದಾರೆ ಪೋಲಿಸ್ ಠಾಣೆಗೆ ಕೂಡಲೇ ತಿಳಿಸಿ, ಅಥವಾ ಡ್ರಗ್ ಫ್ರೀ ಕರ್ನಾಟಕ ಆಫ್ ಡೌನ್ಲೋಡ್ ಮಾಡಿಕೊಂಡು ದೂರುಗಳನ್ನು ಸಲ್ಲಿಸಬಹುದು. ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆಯಿದೆ. ಈ ಬಗ್ಗೆ ಮೇಲಾಧಿಕಾರಿಗಳಿಗೆ ತಿಳಿಸಲಾಗಿದೆ. ಅಂಚಿನಲ್ಲಿರುವ ಗ್ರಾಮಗಳಲ್ಲಿ ಕಾನೂನು ಬಾಹಿರ ಚಟುವಟಿಕೆಗಳು ಹೆಚ್ಚಾಗುತ್ತಿದ್ದು, ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗುವುದು. ಮನೆಗಳಿಗೆಸಿಸಿಟಿವಿಕ್ಯಾಮರಾಹಾಕಿಸಿಕೊಳ್ಳಿ. ಮಹಿಳೆಯರು ಆಭರಣಗಳನ್ನು ಧರಿಸಿ, ಒಬ್ಬಂಟಿಯಾಗಿ ಓಡಾಡಬೇಡಿ ಎಂದು ಸಾರ್ವಜನಿಕರಿಗೆ ಕಿವಿಮಾತು ಹೇಳಿದರು.

ತಾಲ್ಲೂಕಿನ ಅಂಚಿನಲ್ಲಿರುವ ಗ್ರಾಮಗಳಲ್ಲಿ ಕಳ್ಳತನ ಹೆಚ್ಚಾಗಿದೆ. ವಿದ್ಯಾರ್ಥಿಗಳು ರಮ್ಮಿ ಆಟಕ್ಕೆ ತುತ್ತಾಗಿದ್ದಾರೆ. ಮುಖ್ಯ ರಸ್ತೆಗಳಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಬೇಕು. 15 ವರ್ಷದೊಳಗಿನ ಬಾಲಕರು ವಾಹನ ಚಲಾಯಿಸುತ್ತಿದ್ದು, ಇದನ್ನು ಸಂಪೂರ್ಣವಾಗಿ ನಿಷೇಧಿಸಬೇಕು. ಶಾಲಾ ಕಾಲೇಜು ಹುಡುಗ ಹುಡುಗಿಯರ ಬಗ್ಗೆ ನಿಗಾ ಇಡಬೇಕು. ಇನ್ನಷ್ಟು ಬೀಟ್ ಪೋಲಿಸರನ್ನು ಹಾಕಿಕೊಡಿ ಎಂದು ಎಸ್. ನೇರಲಕೆರೆ ಗ್ರಾಮದ ನಟರಾಜ್ ಮನವಿ ಮಾಡಿದರು.'

ವೇಳೆಡಿವೈಎಪಿಶಿವಕುಮಾರ್,ಪೊಲೀಸ್ ಇನ್ಸ್ಪೆಕ್ಟರ್ ಗಳಾದ ಕೆ.ಟಿ.ರಮೇಶ್, ಮಧು, ಸೈಬರ್ ಇನ್ಸ್ಪೆಕ್ಟರ್ ವೆಂಕಟೇಶ್, ಸಬ್ ಇನ್ಸ್ಪೆಕ್ಟರ್‌ಗಳಾದ ಮಹೇಶ್‌ಕುಮಾರ್, ಶ್ರೀಶೈಲ, ಭೀಮನಗೌಡ ಪಾಟೀಲ್, ಮಂಜುನಾಥ್, ಸೇರಿದಂತೆ ಪೋಲಿಸ್ ಇಲಾಖೆ ಸಿಬ್ಬಂದಿಗಳು, ಬೀಟ್ ಸದಸ್ಯರು ಹಾಗೂ ಸಾರ್ವಜನಿಕರಿದ್ದರು.

---

# ಫಾಸ್ಟ್ ನ್ಯೂಸ್

## ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳಿಗೆ ಉಚಿತ ಡಿ.ಎಡ್ ತರಬೇತಿ

» **ದಾವಣಗೆರೆ**

ರಾಜ್ಯ ಸರ್ಕಾರದಿಂದ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರ, ಮೈಸೂರು ಇಲ್ಲಿ ಉಚಿತವಾಗಿ ಅಂಧ ಮಕ್ಕಳಿಗೆ ಮತ್ತು ಶ್ರವಣದೋಷವುಳ್ಳ ಮಕ್ಕಳಿಗೆ ಶಿಕ್ಷಕರಾಗಲು 2 ವರ್ಷಗಳ ವಿಶೇಷ ಡಿ.ಎಡ್ ತರಬೇತಿಗೆ ಅರ್ಜಿ ಅಹ್ವಾನಿಸಲಾಗಿದೆ. ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ.50 ರಷ್ಟು (ಎಸ್.ಸಿ, ಎಸ್.ಟಿ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಶೇ.45%) ಅಂಕಗಳೊಂದಿಗೆ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ಜುಲೈ 12 ರೊಳಗಾಗಿ ವೆಬ್‌ಸೈಟ್ https://nber-rehabcouncil.gov.in/ ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು(ತರಬೇತಿ) ಕಚೇರಿ, ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ಸರ್ಕಾರಿ ತರಬೇತಿ ಕೇಂದ್ರ, ಪುಲಿಕೇಶಿ ರಸ್ತೆ, ತಿಲಕ್‌ನಗರ, ಮೈಸೂರು-570001, ದೂರವಾಣಿ ಸಂ:0821-2491600, ತರಬೇತಿ ಸಂಯೋಜಕರು: ಆಶಾ.ವಿ.ಹಿರೇಮಠ್-9113561620, ಟಿ.ಡಿ. ಮಂಜುನಾಥ  9686762378 ಸಂಪರ್ಕಿಸಲು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ.ಕೆ.ಕೆ ಪ್ರಕಾಶ್ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ: ಪತ್ತೆಗೆ ಮನವಿ

» **ದಾವಣಗೆರೆ**

ನಗರದ ವಿನೋಬನಗರ ವಾಸಿಯಾದ ನಾಗೇಶ. ಎಸ್.ವೈ ಯಲ್ಲಪ್ಪ (40 ವರ್ಷ) ವ್ಯಕ್ತಿ ಕಾಣೆಯಾದ ಕುರಿತು ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ನಾಗೇಶ್ 6 ಅಡಿ ಎತ್ತರ, ದುಂಡು ಮುಖ ಹೊಂದಿದ್ದು, ಗೋಧಿ ಮೈ ಬಣ್ಣ, ಸಾಧಾರಣ ಮೈಕಟ್ಟು, ಎಡಗಾಲಿನ ಹೆಬ್ಬಟ್ಟಿನ ಕೆಳಗೆ ಗ್ಯಾಂಗ್ರೀನ್, ಬಲಗಾಲಿನ ಪಾದದಲ್ಲಿ ಗ್ಯಾಂಗ್ರೀನ್ ಗಾಯ ಆಗಿರುತ್ತದೆ. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಎಲೆ ಚಿತ್ರವಿರುವ ಶರ್ಟ್, ಕಪ್ಪು ಪ್ಯಾಂಟ್ ಧರಿಸಿರುತ್ತಾರೆ. ಈ ಮೇಲ್ಕಂಡ ಮಹಿಳೆಯ ಕುರಿತು ಮಾಹಿತಿ ಕಂಡುಬಂದಲ್ಲಿ ಮೊ.ಸಂ: 9480803249, 08192-272012, 259213, 253400, 253100 ನ್ನು ಸಂಪರ್ಕಿಸಲು ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

» **ದಾವಣಗೆರೆ**

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರುವಿನ್ಯಾಸಗೊಳಿಸಿದ ಹವಮಾನ ಆಧಾರಿತ ಬೆಳೆ ವಿಮೆ ಯೋಜನೆಯಲ್ಲಿ ರೈತರ ನೋಂದಣಿ ಅವಧಿಯನ್ನು ಜುಲೈ 15 ರವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ತೋಟಗಾರಿಕೆ ಉಪನಿರ್ದೇಶಕ ರಾಘವೇಂದ್ರ ಪ್ರಸಾದ್ ತಿಳಿಸಿದ್ದಾರೆ.

## ಕೆಪಿಟಿಸಿಎಲ್ ವಿದ್ಯುತ್ ಮಾರ್ಗಗಳಲ್ಲಿ ಎಚ್ಚರಿಕೆ

» **ದಾವಣಗೆರೆ**

ರಾಜ್ಯದಲ್ಲಿ ಮಳೆಗಾಲ ಈಗಾಗಲೇ ಶುರುವಾಗಿದ್ದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಸಾರ್ವಜನಿಕ ಸುರಕ್ಷತೆಗಾಗಿ ಮುನ್ನೆಚ್ಚರಿಕೆ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಮೇಲ್ವಿಚಾರಣೆಯ ಅತಿ ಹೆಚ್ಚಿನ ವೋಲ್ಟೇಜ್ ವಿದ್ಯುತ್ ವಾಹಕಗಳು ಮತ್ತು ಪ್ರಸರಣ ಗೋಪುರಗಳ ಬಗ್ಗೆ ಸದಾ ಎಚ್ಚರದಿಂದಿರಿ, ಎಲ್ಲಾ ವಿದ್ಯುತ್ ವಾಹಕಗಳು ಮತ್ತು ಗೋಪುರಗಳಿಂದ ಕನಿಷ್ಠ 10 ಮೀಟರ್ 33 ಅಡಿ ಸುರಕ್ಷಿತ ಅಂತರವನ್ನು ಕಾಯ್ದುಕೊಳ್ಳಬೇಕು. ಬಿದ್ದ ವಾಹಕಗಳು, ಹಾನಿಗೊಳಗಾದ ಗೋಪುರಗಳು ಅಥವಾ ಅಪಾಯಕಾರಿಯಾಗಿ ವಾಲುತ್ತಿರುವ ಮರಗಳನ್ನು ತಕ್ಷಣ ಕೆಪಿಟಿಸಿಎಲ್ ತುರ್ತು ಸಹಾಯವಾಣಿ ಅಥವಾ ಹತ್ತಿರದ ವಿದ್ಯುತ್ ಉಪಕೇಂದ್ರ, ವಿಭಾಗ ಕಚೇರಿಗೆ ವರದಿ ಮಾಡಬೇಕು. ಮಕ್ಕಳು ವಿದ್ಯುತ್ ಕಂಬಗಳ ಸಮೀಪವಿರದಂತೆ ಗಮನಹರಿಸಿ ಮತ್ತು ಅವರಿಗೆ ಅಪಾಯದ ಬಗ್ಗೆ ತಿಳಿಸಬೇಕು. ಹೆಚ್ಚಿನ ಗಾಳಿಯ ಸಮಯದಲ್ಲಿ ವಿದ್ಯುತ್ ತಂತಿಗಳಿಗೆ ತಾಗಬಹುದಾದ ಸಡಿಲ ವಸ್ತುಗಳನ್ನು ಭದ್ರಪಡಿಸಿ. ತ್ರೀವ ಹವಾಮಾನದಲ್ಲಿ ಮನೆಯೊಳಗೆ ಇರಬೇಕು. ಯಾವುದೇ ಕಾರಣಕ್ಕೂ ಬಿದ್ದ ವಿದ್ಯುತ್ ವಾಹಕಗಳನ್ನು ಮುಟ್ಟಬೇಡಿ ಅಥವಾ ಹತ್ತಿರ ಹೋಗಬೇಡಿ, ಪ್ರಸರಣ ವಿದ್ಯುತ್ ಗೋಪುರ ಏರುವುದು ಅಪಾಯಕಾರಿ ಮತ್ತು ನಿಷಿದ್ಧ, ವಿದ್ಯುತ್ ತಂತಿಗಳ ಸಮೀಪ ಗಾಳಿಪಟ ಅಥವಾ ಡ್ರೋನ್‌ಗಳನ್ನು ಹಾರಿಸುವುದನ್ನು ಹಾಗೂ ತಂತಿಗಳು ಅಥವಾ ವಾಹಕದ ಯಾವುದೇ ವಸ್ತುಗಳನ್ನು ಎಸೆಯಬಾರದು. ವಿದ್ಯುತ್ ಮಾರ್ಗಗಳ ಹತ್ತಿರ ಹಾಗೂ ಕೆಳಗೆ ಮರಗಳನ್ನು ನೆಡುವುದು ಅಥವಾ ಯಾವುದೇ ಕಟ್ಟಡಗಳನ್ನು ನಿರ್ಮಿಸಬಾರದು. ಬಿರುಗಾಳಿಯ ಸಮಯದಲ್ಲಿ ವಿದ್ಯುತ್ ಮಾರ್ಗಗಳ ಬಳಿಯ ಮರಗಳ ಕೆಳಗೆ ಆಶ್ರಯ ಪಡೆಯಬೇಡಿ. ಮಳೆಯ ಸಮಯದಲ್ಲಿ ಮತ್ತು ನಂತರ ವಿದ್ಯುತ್ ಮಾರ್ಗಗಳ ಬಳಿ ಹಾಗೂ ವಿದ್ಯುತ್ ಸ್ಥಾಪನೆಗಳ ಬಳಿಯ ಜಲಾವೃತ ಪ್ರದೇಶಗಳಲ್ಲಿ ಹೆಚ್ಚು ಜಾಗರೂಕರಾಗಿರಬೇಕು. ಯಾವುದೇ ಕಾರಣಕ್ಕೂ ಪ್ರಸರಣ ಗೋಪುರಗಳಿಗೆ ಜಾನುವಾರುಗಳನ್ನು ಕಟ್ಟಬೇಡಿ. ಮಳೆ ಅಥವಾ ಇತರ ಪ್ರತಿಕೂಲ ಹವಾಮಾನದ ಸಮಯದಲ್ಲಿ ಪ್ರಸರಣ ಗೋಪುರಗಳ ಕೆಳಗೆ ಆಶ್ರಯ ಪಡೆಯಬೇಡಿ. ಕೃಷಿ ಉಪಕರಣಗಳನ್ನು ನಿರ್ವಹಿಸುವಾಗ ವಿದ್ಯುತ್ ತಂತಿಗಳಿಂದ ಸುರಕ್ಷಿತ ಅಂತರವನ್ನು ಕಾಯ್ದುಕೊಳ್ಳಿ. ಎತ್ತರದ ಟ್ರಾಕ್ಟರ್‌ಗಳು ಮತ್ತು ಇತರ ಉಪಕರಣಗಳ

# ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಭಾಗ್ಯ

## ಗೋಸಿಕೆರೆ, ಬೆಳಗೆರೆ ವ್ಯಾಪ್ತಿಯಲ್ಲಿ ಒಟ್ಟು 70 ಕೋಟಿ ವೆಚ್ಚದಲ್ಲಿ ಬ್ಯಾರೇಜ್ ನಿರ್ಮಾಣಕ್ಕೆ ಸಂಪುಟ ಸಭೆ ಅನುಮೋದನೆ: ಶಾಸಕ ಟಿ.ರಘುಮೂರ್ತಿ ಹರ್ಷ, ಕೃತಜ್ಞತೆ.

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಕ್ಷೇತ್ರದ ಸರ್ವ ತೋಮುಖ ಅಭಿವೃದ್ಧಿಗೆ ಕಳೆದ ಸುಮಾರು 12 ವರ್ಷಗಳಿಂದ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುತ್ತಿದ್ದು ಕ್ಷೇತ್ರದ ಮತದಾರರವಿಶ್ವಾಸವನ್ನುಗಟ್ಟಿಗೊಳಿಸುವಲ್ಲಿ ಯಶಸ್ವಿಯಾಗಿದ್ದಾರೆ. ಕಳೆದ ಎರಡು ವರ್ಷಗಳಿಂದ ನಿರಂತರವಾಗಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರಕ್ಕೆ ಎರಡು ಹೆಚ್ಚುವರಿ ಬಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕೆ ಅವಕಾಶ ನೀಡಬೇಕೆಂದು ವಿಧಾನಸಭಾ ಅಧಿವೇಶನವಲ್ಲದೆ, ಸಿಎಂ, ಡಿ.ಸಿಎಂ ಹಾಗೂ ನೀರಾವರಿ ಸಚಿವರಿಗೆ ಮನವಿ ನೀಡಿ ನಿರಂತರ ಒತ್ತಾಯ ಪಡಿಸುತ್ತಿದ್ದರು.

ಪ್ರಸ್ತುತ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಪರಶುರಾಮಪುರ, ಭೌಳೂರು, ಬೊಂಬೇರಹಳ್ಳಿ, ಕಲಮರಹಳ್ಳಿಯಲ್ಲಿ ಬಿಡ್ಜ್ ಕಂ ಬ್ಯಾರೇಜ್ ನಿರ್ಮಾಣವಾಗಿದ್ದು, ಸುತ್ತಮುತ್ತಲ ಹತ್ತಾರು ಗ್ರಾಮಗಳ, ಸಾವಿರಾರು ರೈತರ ಜಮೀನು ಹಾಗೂ ಜಾನುವಾರುಗಳಿಗೆ ಸಮೃದ್ಧಿ ಕುಡಿಯುವ ನೀರಿನ ಸೌಕರ್ಯವನ್ನು ಶಾಸಕರು ಒದಗಿಸಿದ್ದಾರೆ.



### ತಾಲ್ಲೂಕಿಗೆ ಮತ್ತೊಂದು ಗಿಫ್ಟ್

ತಾಲ್ಲೂಕಿನ ಗಡಿಭಾಗದಲ್ಲಿರುವ ಗುಡಿಹಳ್ಳಿ–ತಪ್ಪಗೊಂಡನಹಳ್ಳಿ ಮಾರ್ಗದ ಮಧ್ಯೆ ವೇದಾವತಿ ನದಿಗೆ ಅಡ್ಡಲಾಗಿ ಬಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕೆ 31.40 ಕೋಟಿ ಅನುದಾನ ದೊರಕಿದೆ.

ಶಾಸಕರ ಒತ್ತಾಯದ ಮೇರೆಗೆ ಜುಲೈ 2ರಂದು ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿಗಿರಿಧಾಮದಲ್ಲಿ ನಡೆದ ಸಂಪುಟ ಸಭೆಯಲ್ಲಿ ಗೋಸಿಗೆರೆ ಗ್ರಾಮದ ಬಳಿ ಬಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕೆ 34.50ಕೋಟಿ ವೆಚ್ಚದ ಕಾಮಗಾರಿಗೆ ಅನುಮೋದನೆ ದೊರಕಿದೆ.



ಇದರಿಂದ ವಡೇರಹಳ್ಳಿ, ಬೊಂಬೇರಹಳ್ಳಿ, ಕಸ್ತೂರಿತಿಮ್ಮನಹಳ್ಳಿ, ದ್ಯಾವರನಹಳ್ಳಿ, ದೇವರಮರಿಕುಂಟೆ ಗ್ರಾಮಗಳ ಸುತ್ತಮುತ್ತಲ್ಲಿನಲ್ಲಿ ಅಂತರ್ಜಲ ಹೆಚ್ಚುತ್ತದಲ್ಲದೆ,ಕುಡಿಯುವನೀರಿನಸಮಸ್ಯೆಗೆ ಶಾಶ್ವತ ಪರಿಹಾರ ದೊರಕಿದಂತಾಗುತ್ತದೆ. ತೋರೆಬೀರನಹಳ್ಳಿ ಮತ್ತು ಬೆಳಗೆರೆ ಗ್ರಾಮದ ನಡುವೆ ಸುಮಾರು 28 ಕೋಟಿ ಬಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕೆ ಅನುಮತಿ ದೊರಕಿದ್ದು ಇದರಿಂದ ನಾರಾಯಣಪುರ, ಕೋನಿಗರಹಳ್ಳಿ, ರಂಗನಾಥಪುರ ವ್ಯಾಪ್ತಿಯ ಗ್ರಾಮಗಳಿಗೆ ನೀರಾವರಿ ಸೌಲಭ್ಯ ದೊರಕಲಿದೆ.

ವಿಶೇಷವಾಗಿ ಜಾಜೂರು ಗ್ರಾಮದ ನಾಗಗೊಂಡನಹಳ್ಳಿ ಬಳಿ ಕಳೆದ 2013ಕ್ಕೂ ಮುಂಚೆ ನಿರ್ಮಾಣ ಮಾಡಿದ್ದ ಬಿಡ್ಜ್ ಕಂ ಬ್ಯಾರೇಜ್ ಮಳೆಗೆ ಕೊಚ್ಚಿಹೋಗಿದ್ದು, ನೂತನ ಬ್ಯಾರೇಜ್ ನಿರ್ಮಾಣಕ್ಕಾಗಿ ಸಣ್ಣ ನೀರಾವರಿ ಇಲಾಖೆಗೆ 8.50ಕೋಟಿ ಅನುದಾನವನ್ನು ನೀಡಲಾಗಿದೆ. ಕ್ಷೇತ್ರ ವ್ಯಾಪ್ತಿಯಲ್ಲಿ ಎರಡು ಕಡೆ ನೂತನ ಬಿಡ್ಜ್ ಕಂ ಬ್ಯಾರೇಜ್ ನಿರ್ಮಾಣ, ಒಂದು ಬ್ಯಾರೇಜ್ ನಿರ್ಮಾಣಕ್ಕಾಗಿ ಅನುದಾನ ನೀಡಿ ಜನರ ಸಂಕಷ್ಟಗಳಿಗೆ ಸ್ಪಂದಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಣ್ಣನೀರಾವರಿ ಸಚಿವ ಎನ್.ಎಸ್.ಬೋಸರಾಜ್‌ರವರಿಗೆ ಶಾಸಕರು ಕೃತಜ್ಞತೆ ತಿಳಿಸಿದ್ದಾರೆ.

---

## ಫಾಸ್ಟ್ ನ್ಯೂಸ್

### ಸಮೀಕ್ಷೆ ಗೊಂದಲ: ಸಂಪುಟದಲ್ಲಿ ತೀವ್ರ ಚರ್ಚೆ

» **ನಂದಿಬೆಟ್ಟ**

ಒಳ ಮೀಸಲಾತಿ ಜಾರಿ ಕುರಿತು ನಡೆಯುತ್ತಿರುವ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಬೆಂಗಳೂರು ನಗರದಲ್ಲಿ ಸರಿಯಾಗಿ ನಡೆಯುತ್ತಿಲ್ಲ ಎಂಬ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ತೀವ್ರ ಚರ್ಚೆಯಾಗಿದ್ದು, ನ್ಯಾ.ನಾಗಮೋಹನ್ ದಾಸ್ ಅವರೊಂದಿಗೆ ಚರ್ಚಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.ಸಂಪುಟ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಸಚಿವ ಎಚ್.ಸಿ.ಮಹದೇವಪ್ಪ ಹಾಗೂ ಕೆ.ಎಚ್.ಮುನಿಯಪ್ಪ, ಬೆಂಗಳೂರು ನಗರದಲ್ಲಿ ನಡೆಯುತ್ತಿರುವ ಸಮೀಕ್ಷೆಗಳ ಬಗ್ಗೆ ಹಲವು ಗೊಂದಲಗಳು ಮೂಡುತ್ತಿವೆ. ಸಮೀಕ್ಷೆ ನಡೆಸದೆ ನಡೆಸಿರುವುದಾಗಿ ಹೇಳಲಾಗುತ್ತಿದೆ ಎಂಬ ಆರೋಪಗಳು ಕೇಳಿ ಬರುತ್ತಿವೆ. ಇನ್ನು ನಗರದಲ್ಲಿ ಸಮೀಕ್ಷೆ ತೀರಾ ವಿಳಂಬವಾಗುತ್ತಿದ್ದು, ಇನ್ನೂ 10 ಸಾವಿರ ಮನೆಗಳ ಸಮೀಕ್ಷೆ ಪೂರ್ಣವಾಗಬೇಕಿದೆ ಎಂದು ಬೇಸರ ವ್ಯಕ್ತಪಡಿಸಿದರು.ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನ್ಯಾ.ನಾಗಮೋಹನ್‌ದಾಸ್ ಅವರ ನೇತೃತ್ವದಲ್ಲಿ ಸಮೀಕ್ಷೆಗೆ ಸೂಚಿಸಲಾಗಿದೆ. ಅವರು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು ರಾಜ್ಯದಲ್ಲಿ ಎಲ್ಲೂ ಸಮಸ್ಯೆಯಾಗದೆ ಸಮೀಕ್ಷೆ ನಡೆದಿದೆ. ಬೆಂಗಳೂರು ನಗರದಲ್ಲಿ ಮಾತ್ರ ಏನಾಗಿದೆ ಎಂಬ ಬಗ್ಗೆ ಅವರನ್ನು ಕರೆದು ಚರ್ಚಿಸಿ ಆದಷ್ಟು ಬೇಗ ಸಮೀಕ್ಷೆ ಪೂರ್ಣಗೊಳಿಸಲಾಗುವುದು ಎಂದು ಭರವಸೆ ನೀಡಿದರು ಎಂದು ಮೂಲಗಳು ತಿಳಿಸಿವೆ.

### ಗ್ರಂಥಾಲಯಕ್ಕೆ ದಾನದ ರೂಪದಲ್ಲಿ ಪುಸ್ತಕ ನೀಡಲು ಸಾರ್ವಜನಿಕರಲ್ಲಿ ಮನವಿ

» **ದಾವಣಗೆರೆ**

ಜಿಲ್ಲಾ ಗ್ರಂಥಾಲಯಕ್ಕೆ ಸಾರ್ವಜನಿಕರು ತಮ್ಮಲ್ಲಿರುವ ಉಪಯೋಗಿಸಿರುವ ಪುಸ್ತಕಗಳು ಹಾಗೂ ಬರೆಯದೆ ಹಾಳೆಗಳು ಉಳಿದಿರುವ ನೋಟ್ ಪುಸ್ತಕ, ಬರೆಯದೇ ಇರುವ ಡೈರಿಗಳನ್ನು ದಾನದ ರೂಪದಲ್ಲಿ ಹತ್ತಿರದ ಗ್ರಂಥಾಲಯಗಳಿಗೆ ನೀಡಬಹುದಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಪರಿಸರ ಸಂರಕ್ಷಣೆ 2025ರ ಅಂಗವಾಗಿ ದಾವಣಗೆರೆ. ಜಿಲ್ಲಾ, ನಗರ ಸಾರ್ವಜನಿಕ ಗ್ರಂಥಾಲಯಗಳ ಉಪಯೋಗಕ್ಕಾಗಿ ತಾವು ಓದಿದ ಉತ್ತಮ ಪುಸ್ತಕಗಳನ್ನು ಜುಲೈ 16 ರೊಳಗಾಗಿ ದೇಣಿಗೆ ರೂಪದಲ್ಲಿ ಉಚಿತವಾಗಿ ನೀಡಬಹುದು. ಹರಿದು ಹಾಳಾದ ಪುಸ್ತಕಗಳನ್ನು ಹೊರತುಪಡಿಸಿ ಖಾಲಿ ಹಾಳೆಗಳು ಉಳಿದಿದಲ್ಲಿ ಮತ್ತು ಡೈರಿಗಳನ್ನು ಸಹ ತಾವುಗಳು ಹತ್ತಿರದ ತಾಲೂಕಿನ ಸಾರ್ವಜನಿಕ ಶಾಖಾ ಗ್ರಂಥಾಲಯಗಳಿಗೆ, ಮತ್ತು ದಾವಣಗೆರೆ ನಗರ ವ್ಯಾಪ್ತಿಯಲ್ಲಿ ಬರುವ ಶಾಖಾ ಗ್ರಂಥಾಲಯಗಳು ಹಾಗೂ ಹತ್ತಿರದ ವಾಚನಾಲಯಗಳಿಗೆ ತಾವುಗಳು ಪಟ್ಟಿ ಸಹಿತವಾಗಿ ಗ್ರಂಥಾಲಯದ ವೇಳೆಯಲ್ಲಿ ನೀಡಿ ಸಂಬಂಧಪಟ್ಟ ಗ್ರಂಥಾಲಯದ ಅಧಿಕಾರಿಗಳಿಂದ ಸ್ವೀಕೃತಿಯನ್ನು ಪಡೆಯಬಹುದು. ಉಳಿದಿರುವ ಖಾಲಿ ಹಾಳೆಗಳನ್ನು ಒಂದುಗೂಡಿಸಿ ಬೈಂಡ್ ಮಾಡಿಸಿ ಬಡ ವಿದ್ಯಾರ್ಥಿಗಳಿಗೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೇಂದ್ರ ಗ್ರಂಥಾಲಯದ ಮುಖ್ಯಗ್ರಂಥಾಲಯಾಧಿಕಾರಿ ತಿಪ್ಪೇಸ್ವಾಮಿ ಪಿ.ಆರ್. ಮೊಬೈಲ್ ಸಂ : 8722313666 ಸಂಪರ್ಕಿಸಬಹುದು

### ತುಂಗಭದ್ರಾ ಜಲಾಶಯ- 20 ಕ್ರಸ್ಟ್‌ಗೇಟ್‌ನಿಂದ ನೀರು ಹೊರಗೆ: ಪುರಂದರ ಮಂಟಪ ಮುಳುಗಡೆ



» **ಹೊಸಪೇಟೆ (ವಿಜಯನಗರ)**

ತುಂಗಭದ್ರಾ ಜಲಾಶಯದಲ್ಲಿ ನೀರಿನ ಸಂಗ್ರಹ 78.23 ಟಿಎಂಸಿ ಅಡಿ ತಲುಪಿದ್ದು, ಗುರುವಾರ 20 ಕ್ರೆಸ್ಟ್‌ಗೇಟ್‌ಗಳನ್ನು ತೆರೆದು, 62,766 ಕ್ಯೂಸೆಕ್‌ನಷ್ಟು ನೀರನ್ನು ನದಿ ಮತ್ತು ಕಾಲುವೆಗಳಿಗೆ ಹರಿಸಲಾಯಿತು. ಇದರಿಂದ ಹಂಪಿಯಲ್ಲಿ ಪುರಂದರ ಮಂಟಪ ಬಹುತೇಕ ಮುಳುಗಡೆಯಾಗಿದೆ.105.78 ಟಿಎಂಸಿ ಅಡಿ ಸಂಗ್ರಹ ಸಾಮರ್ಥ್ಯದ ತುಂಗಭದ್ರಾ ಜಲಾಶಯದಲ್ಲಿ ಅಣೆಕಟ್ಟೆಯ ಸುರಕ್ಷತೆ ದೃಷ್ಟಿಯಿಂದ ಈ ಬಾರಿ 80 ಟಿಎಂಸಿ ಅಡಿಯಷ್ಟು ನೀರನ್ನು ಮಾತ್ರ ಸಂಗ್ರಹಿಸಿ ಇಡಲು ತುಂಗಭದ್ರಾ ಮಂಡಳಿ ನಿರ್ಧರಿಸಿದೆ. ಇನ್ನಷ್ಟು ಕ್ರೆಸ್ಟ್‌ಗೇಟ್‌ಗಳನ್ನು ತೆರೆದು ನೀರು ಹೊರಬಿಡುವ ಸಾಧ್ಯತೆ ಇದೆ. ನದಿ ದಂಡೆಯ ಜನರು ಎಚ್ಚರದಿಂದ ಇರಬೇಕು ಎಂದು ಮಂಡಳಿ ಎಚ್ಚರಿಕೆ ನೀಡಿದೆ. ಕಳೆದ ವರ್ಷ ಜುಲೈ 3ನೇ ವಾರ ಜಲಾಶಯ ಬಹುತೇಕ ಭರ್ತಿಯಾಗಿತ್ತು. ಆಗ ಕ್ರೆಸ್ಟ್‌ಗೇಟ್‌ಗಳನ್ನು ಹಂತ ಹಂತವಾಗಿ ತೆರೆದು ಹೆಚ್ಚುವರಿ ನೀರನ್ನು ಹೊರಗೆ ಬಿಡಲಾಗಿತ್ತು. ಆದರೆ, ಕ್ರೆಸ್ಟ್‌ಗೇಟ್‌ಗಳು ಶಿಥಿಲಗೊಂಡಿವೆ. ಅವುಗಳನ್ನು ಬದಲಿಸುವಂತೆ ತಜ್ಞರು ವರದಿ ನೀಡಿದ ಕಾರಣ ಈ ಬಾರಿ ಗರಿಷ್ಠ ಮಟ್ಟದಲ್ಲಿ ನೀರು ಸಂಗ್ರಹಿಸದಿರಲು ನಿರ್ಧರಿಸಲಾಗಿದೆ. ಹೀಗಾಗಿ 20 ಕ್ರೆಸ್ಟ್‌ಗೇಟ್‌ಗಳನ್ನು ತಲಾ 2.5 ಅಡಿಯಷ್ಟು ಎತ್ತಿ ನೀರು ಹೊರಬಿಡಲಾಗುತ್ತಿದೆ.

---

# ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಖಾಲಿಯಿಲ್ಲ ಎಂದ ವಿಜಯೇಂದ್ರಗೆ ಆರ್ ಅಶೋಕ್ ಪ್ರತಿಕ್ರಿಯೆ

» **ಬೆಂಗಳೂರು**

ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಇಂದು ( ಜುಲೈ 2 ) ರಾಜ್ಯಾಧ್ಯಕ್ಷ ಸ್ಥಾನ ಖಾಲಿ ಇದೆ ಎಂದು ಹೇಳಿದವರು ಯಾರು ಎಂದು ಪ್ರಶ್ನೆ ಹಾಕುವ ಮೂಲಕ ರಾಜ್ಯಾಧ್ಯಕ್ಷ ಸ್ಥಾನದ ಬದಲಾವಣೆ ಬಯಸುತ್ತಿರುವ ಪಕ್ಷದ ರೆಬೆಲ್ ನಾಯಕರಿಗೆ ಟಾಂಗ್ ಕೊಟ್ಟರು.

ಸಂಜೆ ದಿಢೀರ್ ಸುದ್ದಿಗೋಷ್ಠಿ ನಡೆಸಿದ ವಿಪಕ್ಷ ನಾಯಕ ಆರ್ ಅಶೋಕ್ ಸಹ ಈ ಕುರಿತು ಮಾತನಾಡಿದ್ದು, ಅಧ್ಯಕ್ಷರು ಸರಿಯಾಗಿಯೇ ಹೇಳಿದ್ದಾರೆ, ಇಲ್ಲಿ ಯಾವುದೇ ಅಧ್ಯಕ್ಷರ ಸ್ಥಾನವೂ ಖಾಲಿಯಿಲ್ಲ ಎಂದು ವಿಜಯೇಂದ್ರಗೆ ಬೆಂಬಲ ವ್ಯಕ್ತಪಡಿಸಿದರು.

ಇನ್ನೂ ಮುಂದುವರಿದು ಮಾತನಾಡಿದ ಆರ್ ಅಶೋಕ್ ಕೇವಲ ಕರ್ನಾಟಕದಲ್ಲಿ ಮಾತ್ರವಲ್ಲ ಇಡೀ ದೇಶದಲ್ಲಿ ಅಧ್ಯಕ್ಷರ ಚುನಾವಣೆ ನಡೆಯುತ್ತಿದೆ, ಆದ್ದರಿಂದ ನಮ್ಮ ಕೇಂದ್ರದ ನಾಯಕರು ಏನು ತೀರ್ಮಾನ ತೆಗೆದುಕೊಳ್ಳುತ್ತಾರೋ ಅದಕ್ಕೆ ನಾವೆಲ್ಲರೂ ಬದ್ಧವಾಗಿರಬೇಕಾಗುತ್ತದೆ, ಯಾರನ್ನಾದರೂ ಘೋಷಣೆ ಮಾಡಲಿ, ವಿಜಯೇಂದ್ರ ಅವರನ್ನೇ ಮುಂದುವರಿಸಲಿ ನಮ್ಮದೇನೂ ಅಭ್ಯಂತರವಿಲ್ಲ, ಇದರಲ್ಲಿ ಎರಡು ಮಾತಿಲ್ಲ ಎಂದರು.

ಇನ್ನು ಪ್ರಿಯಾಂಕ್ ಖರ್ಗೆ ಆರ್‌ಎಸ್‌ಎಸ್ ನಿಷೇಧದ ಕುರಿತು ನೀಡಿದ ಹೇಳಿಕೆಗೂ ಸಹ ಪ್ರತಿಕ್ರಿಯಿಸಿದ ಅಶೋಕ್ ಇಂದಿರಾ ಗಾಂಧಿಯವರೇ ಎಮರ್ಜೆನ್ಸಿ ಸಮಯದಲ್ಲಿ ಆರ್‌ಎಸ್‌ಎಸ್ ಬ್ಯಾನ್ ಮಾಡಿ ಬಳಿಕ ಮಾನ ಮರ್ಯಾದೆ ಬಿಟ್ಟು ವಾಪಸ್ ತೆಗೆದುಕೊಂಡರು, ಇನ್ನು ಇವರು ಬ್ಯಾನ್ ಮಾಡ್ತಾರಾ ಎಂದು ಟೀಕಿಸಿದರು.

### ಮುಖ್ಯಮಂತ್ರಿ ಬದಲಾವಣೆ ಖಚಿತ: ಅಶೋಕ್

ಅಕ್ಟೋಬರ್ ಅಥವಾ ನವೆಂಬರ್‌ನಲ್ಲಿ ಖಚಿತವಾಗಿ ಮುಖ್ಯಮಂತ್ರಿ ಬದಲಾವಣೆಯಾಗಲಿದೆ. ಕಾಂಗ್ರೆಸ್ ಪಕ್ಷ ಮನೆಯೊಂದು ಮೂರು ಬಾಗಿಲು ಆಗಿದ್ದು, ಎಲ್ಲರೂ ಮುಖ್ಯಮಂತ್ರಿಯಾಗಲು ಮುಂದಾಗಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಟೀಕಿಸಿದರು. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ ಎಂದು ಪಕ್ಷದ ವರಿಷ್ಠರು ಹೇಳಬೇಕು. ಆದರೆ, ಭಯದಿಂದ ಸ್ವತಃ ಸಿದ್ದರಾಮಯ್ಯನವರೇ ಅದನ್ನು ಪದೇ ಪದೇ ಹೇಳುತ್ತಿದ್ದಾರೆ ಎಂದರು. ಅಧಿಕಾರವನ್ನು ಒದ್ದು ಕಿತ್ತುಕೊಳ್ಳುತ್ತೇನೆ ಎನ್ನುವ ಡಿ.ಕೆ.ಶಿವಕುಮಾರ್ ಅವರೇ ಈ ರೀತಿಯ ಸಂದೇಶ ನೀಡುತ್ತಿದ್ದಾರೆ. ಸರ್ಕಾರದಲ್ಲಿ ಹಣವಿಲ್ಲದೆ, ಅಭಿವೃದ್ಧಿ ಶೂನ್ಯವಾಗಿ ಶಾಸಕರು ಬೇಸರಗೊಂಡಿದ್ದಾರೆ. ಜನರಲ್ಲಿ ವಿಶ್ವಾಸ ಹೊರಟುಹೋಗಿದೆ ಎಂದರು.

---

# ಮಳೆಗಾಗಿ ಶ್ರೀಸೂಜಿಮಲ್ಲೇಶ್ವರಸ್ವಾಮಿಗೆ ರುದ್ರಾಭಿಷೇಕ, ಜಲಾಭಿಷೇಕ ಪೂಜೆ



» **ಚಳ್ಳಕೆರೆ**

ಕಳೆದ ಮೇ ತಿಂಗಳಲ್ಲಿ ತಾಲ್ಲೂಕಿನಾದ್ಯಂತ ನಿರೀಕ್ಷೆಗೂ ಮೀರಿ ಉತ್ತಮ ಮಳೆಯಾಗಿದ್ದು, ರೈತರು ಹಾಗೂ ಸಾರ್ವಜನಿಕರಲ್ಲಿ ನೆಮ್ಮದಿ ಮನೆ ಮಾಡಿತ್ತು. ಆದರೆ, ಜೂನ್ ತಿಂಗಳಲ್ಲಿ ಸಂಪೂರ್ಣವಾಗಿ ಯಾವ ಭಾಗದಲ್ಲೂ ಮಳೆಯಾಗದೆ ಮತ್ತೊಮ್ಮೆ ರೈತರು ಆತಂಕ ಪಡುವ ಸ್ಥಿತಿ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ದೇವಸ್ಥಾನಗಳಿಗೆ ತೆರಳಿ ಪೂಜೆ ಮಾಡುವ ಮೂಲಕ ವರುಣನ ಕೃಪೆಗಾಗಿ ಪ್ರಾರ್ಥಿಸಲಾಗುತ್ತಿದೆ.

ನಗರದ ಬಳ್ಳಾರಿ ರಸ್ತೆಯಲ್ಲಿರುವ ಸೂಜಿಮಲ್ಲೇಶ್ವರನಗರದ ಸೂಜಿಮಲ್ಲೇಶ್ವರಸ್ವಾಮಿ ದೇವಸ್ಥಾನದಲ್ಲಿ ಮಳೆಗಾಗಿ ಪ್ರಾರ್ಥಿಸಿ ಗುರುವಾರ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ದೇವಸ್ಥಾನದ ಆಡಳಿತಮಂಡಳಿ ಭಕ್ತರ ನೆರವಿನಿಂದ ನೆರವೇರಿಸಿದರು. ಕಳೆದ ವರ್ಷವೂ ಸಹ ಮಳೆಗಾಗಿ ಈ ದೇವಸ್ಥಾನದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಗಿತ್ತು.

ಗುರುವಾರ ಶ್ರೀಸ್ವಾಮಿಗೆ ರುದ್ರಾಭಿಷೇಕ, ಜಲಾಭಿಷೇಕ ಹಾಗೂ ಪೂಜೆಯ ವಿಧಿವಿಧಾನಗಳನ್ನು ನೆರೆದಿದ್ದ ಭಕ್ತರ ಸಮ್ಮುಖದಲ್ಲಿ ಯಶಸ್ವಿಯಾಗಿ ನಡೆಸಲಾಯಿತು. ಈ ಬಾರಿಯಾದರೂ ಮತ್ತೊಮ್ಮೆ ತಾಲ್ಲೂಕಿನಾದ್ಯಂತ ಉತ್ತಮ ಮಳೆಯಾಗಿ ರೈತರು ಹೆಚ್ಚು, ಹೆಚ್ಚು ಬೆಳೆ ಬೆಳೆಯುವಂತಾಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಿರುವುದಾಗಿ ಕೋಟೆಚಂದ್ರಶೇಖರ್ ತಿಳಿಸಿದ್ದಾರೆ. ಪೂಜಾ ಕಾರ್ಯಕ್ರಮದಲ್ಲಿ ಸಿ.ಬಿ.ಆದಿಭಾಸ್ಕರಶೆಟ್ಟಿ, ಕೋಟೆಬಸವರಾಜು, ವಸಂತಕುಮಾರ್, ಲೋಕೇಶ್, ಮಲ್ಲಿಕಾರ್ಜುನ್, ಬಸವರಾಜು, ಕೋಟೆಜಯಣ್ಣ, ಮಜ್ಜಿಗೆವೀರೇಶ್, ತಬಲಮಂಜಣ್ಣ, ನಿಡಗಲ್‌ಸಿದ್ದಣ್ಣ, ಶಾಂತವೀರಸ್ವಾಮಿ ಮುಂತಾದವರು ಪಾಲ್ಗೊಂಡಿದ್ದರು.

---

### ಪ್ರಧಾನಮಂತ್ರಿ ಅವಾಸ್ 2.0 ಯೋಜನೆಯಡಿ ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನಲ್ಲಿ ರಾಜ್ಯಾದ್ಯಂತ ನಗರ ಪ್ರದೇಶಗಳಲ್ಲಿ ಪ್ರಧಾನಮಂತ್ರಿ ಅವಾಸ್ 2.0 ಯೋಜನೆಯಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಒಂಟಿ ಮಹಿಳೆಯರು, ಅಂಗವಿಕಲರು , ಹಿರಿಯ ನಾಗರಿಕರು, ತೃತೀಯ ಲಿಂಗಿಗಳು, ಎಸ್‌ಸಿ, ಎಸ್‌ಟಿ, ಹಿಂದುಳಿದ, ಅಲ್ಪಸಂಖ್ಯಾತ ವರ್ಗದವರು, ಸ್ವಚ್ಛತಾ ಕಾರ್ಮಿಕರು, ಪಿಎಂ ಎಸ್‌ಎ ವಿನಿಧಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪಾರಿಗಳು ಮತ್ತು ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಕೈಗಾರಿಕರು, ವಲಸೆ ಬಂದ ಕುಟುಂಬದವರು ತಮ್ಮ ಅರ್ಜಿಗಳನ್ನು URL:http://pmayurban.gov.in ಜುಲೈ 15 ರೊಳಗಾಗಿ ಸಲ್ಲಿಸಬಹುದೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

# ರಾಜ್ಯ ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ "6,770 ಡಿ–ಗ್ರೂಪ್ ನೌಕರ"ರ ಭರ್ತಿಗೆ ಸರ್ಕಾರ ಗ್ರೀನ್ ಸಿಗ್ನಲ್

» **ಬೆಂಗಳೂರು**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ರಾಜ್ಯವಲಯದ ಆಸ್ಪತ್ರೆಗಳಲ್ಲಿ ಖಾಲಿ ಇರುವ 6,770 ಗ್ರೂಪ್–ಡಿ ಹುದ್ದೆಗಳನ್ನು ಹೊರಗುತ್ತಿಗೆಯಡಿ ಭರ್ತಿ ಮಾಡಲು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಮೇಲೆ ಓದಲಾದ ಕ್ರಮಾಂಕ(1)ರ ಆದೇಶದಲ್ಲಿ 2019–20ನೇ ಸಾಲಿಗೆ ಆಸ್ಪತ್ರೆಗಳಲ್ಲಿ ಖಾಲಿ ಇರುವ ಗ್ರೂಪ್–ಡಿ ಹುದ್ದೆಗಳಲ್ಲಿ ಶೇ.30 ರಷ್ಟು ನಾನ್–ಕ್ಲಿನಿಕಲ್ ಹಾಗೂ ಶೇ.45 ರಷ್ಟು ಗ್ರೂಪ್–ಡಿ ಹುದ್ದೆಗಳನ್ನು ಒಟ್ಟಾರೆಯಾಗಿ ಶೇ.75 ಮೀರದಂತೆ ಈ ಹಿಂದಿನ ಟೆಂಡರು ನಿಯಮಗಳನ್ನು ಪಾಲಿಸಿಕೊಂಡು ಹಾಗೂ ಹೊರಗುತ್ತಿಗೆ ಸಂಪನ್ಮೂಲದಡಿ ಟೆಂಡರ್ ಕರೆಯಲು ಕ್ರಮ ತೆಗೆದುಕೊಳ್ಳುವಂತೆ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ(2)ರ ಏಕ ಕಡತದಲ್ಲಿ ದಿನಾಂಕ:09.01.2025ರಂದು ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ರಾಜ್ಯವಲಯದ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ರೋಗಿಗಳ ಹಿತದೃಷ್ಟಿಯಿಂದ ಆಸ್ಪತ್ರೆಗಳಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳಲು ಮತ್ತು ಸಾರ್ವಜನಿಕರಿಗೆ ಹೆಚ್ಚಿನ/ ಗುಣಮಟ್ಟದ ಆರೋಗ್ಯ ಸೇವೆಯನ್ನು ಒದಗಿಸಲು ಪ್ರಸ್ತುತ ಚಾಲ್ತಿಯಲ್ಲಿರುವ ಗ್ರೂಪ್–ಡಿ ಖಾಲಿ ಹುದ್ದೆಗಳಿಗೆ ಎದುರಾಗಿ ಪಡೆದುಕೊಳ್ಳುತ್ತಿರುವ ಶೇ 75 % ರಷ್ಟರ ಬದಲಿಗೆ ಶೇ 100% ರಷ್ಟು ಗ್ರೂಪ್–ಡಿ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳುವ ಬಗ್ಗೆ ಚರ್ಚಿಸಲಾಗಿರುವುದಾಗಿ ಪ್ರಸ್ತಾಪಿಸಿರುತ್ತಾರೆ.

ಈ ಸಂಬಂಧ ರಾಜ್ಯವಲಯದ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಹಾಲಿ ಖಾಲಿ ಇರುವ ಗ್ರೂಪ್.ಡಿ. ಹುದ್ದೆಗಳಿಗೆ ಎದುರಾಗಿ ಪ್ರಯೋಜಿಸಿಕೊಳ್ಳಲಾಗುತ್ತಿರುವ ಶೇ 75%ರಷ್ಟು ಹುದ್ದೆಗಳ ಬದಲಾಗಿ ಆಸ್ಪತ್ರೆಗಳಲ್ಲಿ ಹೊರಗುತ್ತಿಗೆ ಮೂಲಕ ಒದಗಿಸಿಕೊಳ್ಳಲಾಗುತ್ತಿರುವ ಗ್ರೂಪ್.ಡಿ. ಹಾಗೂ ನಾನ್ ಕ್ಲಿನಿಕಲ್ ಸೇವೆಗಳನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಆಸ್ಪತ್ರೆಗಳಲ್ಲಿನ ಖಾಲಿ ಹುದ್ದೆಗಳ ಶೇ 100 % ರಷ್ಟು ಪೂರ್ಣ ಪ್ರಮಾಣದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಲು ಕೋರಿರುತ್ತಾರೆ ಮತ್ತು ರಾಜ್ಯವಲಯದ ಆಸ್ಪತ್ರೆಗಳಲ್ಲಿ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುವ ಗ್ರೂಪ್.ಡಿ. ಹಾಗೂ ನಾನ್ ಕ್ಲಿನಿಕಲ್ ಸಿಬ್ಬಂದಿಗಳಿಗೆ ವೇತನವನ್ನು ರಾಜ್ಯವಲಯದ ಲೆಕ್ಕ ಶೀರ್ಷಿಕ 2210–01–110–1–22 ರ ಉಪ ಲೆಕ್ಕ ಶೀರ್ಷಿಕ 034(ಗುತ್ತಿಗೆ/ಹೊರಗುತ್ತಿಗೆ) ರಡಿ ಭರಿಸಲಾಗುತ್ತಿರುವುದಾಗಿ ತಿಳಿಸಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3)ರ ಕಡತದಲ್ಲಿ ಗುತ್ತಿಗೆ/ಹೊರಗುತ್ತಿಗೆ ಸಿಬ್ಬಂದಿಗಳಿಗೆ ವೇತನವನ್ನು ರಾಜ್ಯವಲಯ, ಜಿಲ್ಲಾವಲಯ(ಕೇಂದ್ರ ಪುರಸ್ಕೃತ ಯೋಜನೆ ಒಳಗೊಂಡಂತೆ) ಹಾಗೂ ತಾಲ್ಲೂಕು ವಲಯಗಳಲ್ಲಿ ಬಿಡುಗಡೆಗೊಳ್ಳುತ್ತಿದ್ದು, ರಾಜ್ಯವಲಯದ ಲೆಕ್ಕ ಶೀರ್ಷಿಕೆಯ ವೇತನದ ಅನುದಾನವು ಆಯುಕ್ತಾಲಯದಿಂದ ಸಂಬಂಧಪಟ್ಟ ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ನೇರವಾಗಿ ಬಿಡುಗಡೆ ಮಾಡಲಾಗುತ್ತಿದ್ದು, ಇನ್ನು ಮುಂದೆ ರಾಜ್ಯವಲಯದ ಅಡಿಯಲ್ಲಿ ಹೊರಗುತ್ತಿಗೆ ನೌಕರರ ನಿರ್ದಿಷ್ಟಗೊಳಿಸಿದ ಮಿತಿಯನ್ನಾದರಿಸಿ ವೇತನವನ್ನು ಪಾವತಿಸಲು ಕ್ರಮಕೈಗೊಳ್ಳಲಾಗುವುದು ಹಾಗೂ ಗ್ರೂಪ್.ಡಿ. ಹಾಗೂ ನಾನ್ ಕ್ಲಿನಿಕಲ್ ಸಿಬ್ಬಂದಿಗಳನ್ನು ಒಟ್ಟಾರೆಯಾಗಿ ಶೇ 80% ರಷ್ಟು (40+40) ಪಡೆದುಕೊಂಡು ಹಂಚಿಕೆ ಮಾಡುವ ಅನುಪಾತದ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಂದ ಅಭಿಪ್ರಾಯ ಪಡೆದು ಅನುಪಾತವನ್ನು ನಿಗಧಿಪಡಿಸುವುದು ಸೂಕ್ತವಾಗಿರುತ್ತದೆ ಎಂದು ತಿಳಿಸುತ್ತಾ, ಸ್ಪಷ್ಟ ಮಾರ್ಗಸೂಚಿಗಳನ್ನೊಳಗೊಂಡ ಆದೇಶವನ್ನು ಸರ್ಕಾರದ ಹಂತದಲ್ಲಿ ಹೊರಡಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, 2025–26ನೇ ಸಾಲಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ರಾಜ್ಯವಲಯದ 'ಆಸ್ಪತ್ರೆಗಳಲ್ಲಿ ಖಾಲಿ ಇರುವ ಗ್ರೂಪ್–ಡಿ ಹುದ್ದೆಗಳ ಪೈಕಿ ಶೇಕಡ 80 ರಷ್ಟು (80%) ಹುದ್ದೆಗಳನ್ನು ಮಾತ್ರ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಈ ಕೆಳಗಿನ ಷರತ್ತುಗಳಿಗೊಳಪಡಿಸಿ ಅನುಮತಿ ನೀಡಿ ಆದೇಶಿಸಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T